ಸಂಪುಟ : 10 ಸಂಚಿಕೆ: 143 ಪುಟ : 4+2 ಬೆಲೆ: 3.00 ಗುರುವಾರ ಜುಲೈ 10 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 143 Pages : 4+2 Price : 3.00 Thursday July 10 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ತುರ್ತು ಪರಿಸ್ಥಿತಿ ಕರಾಳತೆಯ ಅನಾವರಣ ಕಾರ್ಯಕ್ರಮ ನಾಳೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನದ ಆಶಯಗಳನ್ನು ಹತ್ತಿಕ್ಕಿ ಪ್ರಜಾಪ್ರಭುತ್ವದ ಕಗ್ಗೊಲೆಗೆ ಕಾರಣವಾದ ತುರ್ತು ಪರಿಸ್ಥಿತಿ ಕರಾಳತೆ ಅನಾವರಣ ಕಾರ್ಯಕ್ರಮವು 'ಸಾಮಾಜಿಕ ನ್ಯಾಯಕ್ಕಾಗಿ ನಾಗರಿಕರು' ವೇದಿಕೆ ವತಿಯಿಂದ ಜುಲೈ 11ರಂದು ಸಂಜೆ 4 ಗಂಟೆಗೆ ಗದಗ ನಗರದ ಮುಳಗುಂದ ನಾಕಾ ಹತ್ತಿರದ ವಿಠಲಾರೂಢ ಕಲ್ಯಾಣ ಮಂಟಪದಲ್ಲಿ ನಡೆಯಲಿದೆ.

ಕಾರ್ಯಕ್ರಮದ ಮುಖ್ಯ ವಕ್ತಾರರಾಗಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆಗಮಿಸಲಿದ್ದು, ಉದ್ಘಾಟಕರಾಗಿ ಮಾಜಿ ಮುಖ್ಯಮಂತ್ರಿ, ಹಾಲಿ ಸಂಸದ ಬಸವರಾಜ ಬೊಮ್ಮಾಯಿ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ, ಮಾಜಿ ಸಚಿವ ಕಳಕಪ್ಪ ಬಂಡಿ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಉಪಸ್ಥಿತರಿರುವರು.

ಬಿಜೆಪಿ ಪದಾಧಿಕಾರಿಗಳು, ಪ್ರಮುಖರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಸಂಚಾಲಕರಾದ ಲಿಂಗರಾಜ ಪಾಟೀಲ ಮಲ್ಲಾಪೂರ, ಬಿಜೆಪಿ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರ್.ಕೆ. ಚವ್ಹಾಣ, ಪಕ್ಕಿರೇಶ ರಟ್ಟಿಹಳ್ಳಿ, ಸಹ-ಸಂಚಾಲಕ ರಮೇಶ ಸಜ್ಜಗಾರ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಅಕ್ರಮ ಗಣಿಗಾರಿಕೆ ಪ್ರಕರಣ। ವಶಪಡಿಸಿಕೊಂಡ ಚಿನ್ನ ಬಿಡುಗಡೆಗೆ ಜನಾರ್ದನ ರೆಡ್ಡಿ ಮನವಿ

■ವಿಜಯಸಾಕ್ಷಿ ಸುದ್ದಿ, ತೆಲಂಗಾಣ

ಕೇಂದ್ರ ತನಿಖಾ ದಳ (ಸಿಬಿಐ) ತನಿಖೆಯ ಸಮಯದಲ್ಲಿ ವಶಪಡಿಸಿಕೊಂಡ 57.89 ಕಿಲೋಗ್ರಾಂಗಳಷ್ಟು ಚಿನ್ನವನ್ನು ಬಿಡುಗಡೆ ಮಾಡುವಂತೆ ಕೋರಿ ತೆಲಂಗಾಣ ಹೈಕೋರ್ಟ್‌ನಲ್ಲಿ ಓಬಳಾಪುರಂ ಅಕ್ರಮ ಗಣಿಗಾರಿಕೆ ಪ್ರಕರಣದ ಪ್ರಮುಖ ಆರೋಪಿ ಗಾಲಿ ಜನಾರ್ದನ ರೆಡ್ಡಿ ಅರ್ಜಿ ಸಲ್ಲಿಸಿದ್ದಾರೆ. ಹೈ ಪ್ರೊಫೈಲ್ ಗಣಿಗಾರಿಕೆ ಹಗರಣದ ತನಿಖೆಯ ಭಾಗವಾಗಿ ಚಿನ್ನವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.

ಜುಲೈ 8 ರ ಮಂಗಳವಾರ ನ್ಯಾಯಮೂರ್ತಿ ಕೆ. ಲಕ್ಷ್ಮಣ್ ಅವರ ಪೀಠ ಅರ್ಜಿ ವಿಚಾರಣೆ ನಡೆಸಿತು. ಓಬಳಾಪುರಂ ಮೈನಿಂಗ್ ಕಂಪನಿ (ಒಎಂಸಿ) ಗೆ ಗಣಿಗಾರಿಕೆ ಗುತ್ತಿಗೆ ನೀಡುವ ಮೊದಲು ರೆಡ್ಡಿ ಮತ್ತು ಅವರ ಪತ್ನಿ ಚಿನ್ನವನ್ನು ಖರೀದಿಸಿದ್ದಾರೆ ಎಂದು ರೆಡ್ಡಿ ಪರ ವಕೀಲರು ವಾದಿಸಿದರು. ಸಿಬಿಐ ನ್ಯಾಯಾಲಯವು ಚಿನ್ನವನ್ನು ವಶಪಡಿಸಿಕೊಳ್ಳಲು ಕಾರಣಗಳನ್ನು ನಿರ್ದಿಷ್ಟಪಡಿಸಿಲ್ಲ, ಮಧ್ಯಂತರ ಆದೇಶಗಳನ್ನು ನೀಡಲು ವಿಫಲವಾದರೆ ಅರ್ಜಿದಾರರಿಗೆ ಸರಿಪಡಿಸಲಾಗದ ನಷ್ಟವನ್ನು ಉಂಟುಮಾಡಬಹುದು ಎಂದು ವಕೀಲರು ಎಚ್ಚರಿಸಿದರು. ಇದಕ್ಕೆ ಪ್ರತಿಕ್ರಿಯೆಯಾಗಿ ವಾದಿಸಾಸಿದ ಸಿಬಿಐ ವಕೀಲ ಶ್ರೀನಿವಾಸ್ ಕಪಾಟಿಯಾ, ಕೌಂಟರ್ ಅಫಿಡವಿಟ್ ಸಲ್ಲಿಸಲು ಸಮಯ ಕೋರಿದರು. ಈ ಕೋರಿಕೆಯನ್ನು ಅಂಗೀಕರಿಸಿದ ನ್ಯಾಯಮೂರ್ತಿ ಲಕ್ಷ್ಮಣ್, ವಿಚಾರಣೆಯನ್ನು ಜುಲೈ 23 ಕ್ಕೆ ಮುಂದೂಡಿದರು.

### ಸಿಐಟಿಯು ಗದಗ ಜಿಲ್ಲಾ ಸಮಿತಿಯ ವತಿಯಿಂದ ಕಾರ್ಮಿಕ ವಿರೋಧಿ ಸಂಹಿತೆಗಳನ್ನು ರದ್ದುಪಡಿಸಲು ಆಗ್ರಹಿಸಿ ಪ್ರತಿಭಟನೆ

# ಹಲವು ಬೇಡಿಕೆಗಳ ಈಡೇರಿಕೆಗೆ ಹಕ್ಕೊತ್ತಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕ ವಿರೋಧಿ ಸಂಹಿತೆಗಳನ್ನು ರದ್ದುಪಡಿಸಲು, ರೈತ ಕಾರ್ಮಿಕರ ಪ್ರಮುಖ ಬೇಡಿಕೆಗಳ ಈಡೇರಿಕೆಗಾಗಿ ಸಿಐಟಿಯು ಗದಗ ಜಿಲ್ಲಾ ಸಮಿತಿಯ ವತಿಯಿಂದ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಪ್ರಧಾನಮಂತ್ರಿ ಮತ್ತು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಸಿಐಟಿಯು ಗದಗ ಜಿಲ್ಲಾ ಸಂಚಾಲಕ ಮಹೇಶ ಹಿರೇಮಠ ಮಾತನಾಡಿ, ದೇಶದ ಕಾರ್ಮಿಕ ವರ್ಗದ ತೀವ್ರ ವಿರೋಧವನ್ನೂ ಲೆಕ್ಕಿಸದೇ 2020ರ ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಹಾಗೂ 2019ರ ಸಂಸತ್ತಿನ ಅಧಿವೇಶನದಲ್ಲಿ ದೇಶದಲ್ಲಿ ಜಾರಿಯಲ್ಲಿದ್ದ 29 ಕಾರ್ಮಿಕ ಕಾನೂನುಗಳ ಬದಲಾಗಿ ಕೈಗಾರಿಕಾ ಸಂಬಂಧಗಳ ಸಂಹಿತೆ, ಸಾಮಾಜಿಕ ಭದ್ರತೆ ಸಂಹಿತೆ, ಔದ್ಯೋಗಿಕ ಸುರಕ್ಷತೆ ಆರೋಗ್ಯ ಮತ್ತು ಕೆಲಸದ ಸಂಹಿತೆ ಹಾಗೂ ವೇತನ ಸಂಹಿತೆಗಳನ್ನಾಗಿ ಅಂಗೀಕರಿಸಲಾಗಿದೆ. ದೇಶದ ಕಾರ್ಮಿಕ ವರ್ಗದ ತೀವ್ರ ಹೋರಾಟಗಳಿಂದಾಗಿ ಈ ಸಂಹಿತೆಗಳು ಇನ್ನೂ ಜಾರಿಮಾಡಲು ಸಾಧ್ಯವಾಗಿಲ್ಲವಾದರೂ ಮತ್ತೆ ಸರಕಾರ ಈ ಸಂಹಿತೆಗಳನ್ನು ಜಾರಿಮಾಡಲು ಮುಂದಾಗುತ್ತಿದೆ.

ಈ ಕಾರ್ಮಿಕ ಸಂಹಿತೆಗಳನ್ನು ರದ್ದುಪಡಿಸಲು ಹಾಗೂ ಇತರೆ ರೈತ ಕಾರ್ಮಿಕರ ಬೇಡಿಕೆಗಳಿಗಾಗಿ ದೇಶದ ಎಲ್ಲಾ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ಹಾಗೂ ದೇಶದ ಎಲ್ಲಾ ರೈತ ಸಂಘಟನೆಗಳನ್ನೊಳಗೊಂಡ ಸಂಯುಕ್ತ



ಕಿಸಾನ್ ಮೋರ್ಚಾ ಇಂದು ದೇಶವ್ಯಾಪಿ ಮುಷ್ಕರಕ್ಕೆ ಕರೆ ನೀಡಿದ ಹಿನ್ನೆಲೆಯಲ್ಲಿ ಇಂದು ಮುಷ್ಕರ ನಡೆಸಿ ದುಡಿಯುವ ಜನರ ಹಕ್ಕೊತ್ತಾಯಗಳ ಮನವಿಯನ್ನು ಕೇಂದ್ರ ಹಾಗೂ ರಾಜ್ಯ ಸರಕಾರಗಳಿಗೆ ಸಲ್ಲಿಸಲಾಗುತ್ತಿದೆ ಎಂದರು.

ಅಂಗನವಾಡಿ, ಬಿಸಿಯೂಟ, ಆಶಾ ಮುಂತಾದ ಕಾರ್ಮಿಕರನ್ನು ಕನಿಷ್ಠ ವೇತನ ವ್ಯಾಪ್ತಿಗೆ ಒಳಪಡಿಸಬೇಕು. ರಾಜ್ಯದಲ್ಲಿ ರೈತ ವಿರೋಧಿ ತಿದ್ದಪಡಿ ಕೃಷಿ ಕಾಯ್ದೆಗಳನ್ನು ವಾಪಸ್ ಪಡೆಯಬೇಕು.

ಅತ್ಯುನ್ನತ ಪಕ್ಷೀಯ ಸಂಸ್ಥೆಯಾದ ಭಾರತೀಯ ಕಾರ್ಮಿಕ ಸಮ್ಮೇಳನ (ಐಎಲ್‌ಸಿ) ನಡೆಸಬೇಕು. ವಿದ್ಯುತ್ ಶಕ್ತಿ ಮಸೂದೆ-2020 ಹಿಂಪಡೆಯಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

> ರಾಜ್ಯದಲ್ಲಿ ದುಡಿತದ ಅವಧಿಯನ್ನು ದಿನಕ್ಕೆ 10-12 ಗಂಟೆಗೆ ಹೆಚ್ಚಿಸುವ ಅವೈಜ್ಞಾನಿಕ ಪ್ರಸ್ತಾವಗಳನ್ನು ಕೈಬಿಡಬೇಕು. ಜೀವನ ಯೋಗ್ಯ ಕನಿಷ್ಠ ವೇತನ ರೂ 36,000 ನಿಗದಿ ಮಾಡಬೇಕು. ಸಾರ್ವತ್ರಿಕ ಪಿಂಚಣಿ ಜಾರಿಗೊಳಿಸಿ ಕನಿಷ್ಠ ರೂ. 8000 ಪಿಂಚಣಿ ನೀಡಬೇಕು. ಸಾರ್ವಜನಿಕ ಉದ್ದಿಮೆಗಳ ಖಾಸಗೀಕರಣ ಮತ್ತು ನಗದೀಕರಣ ನಿಲ್ಲಿಸಬೇಕು. ಉದ್ಯೋಗ ಖಾತ್ರಿ ಯೋಜನೆಯಡಿ ದಿನದ ಕೂಲಿ ರೂ. 600ಕ್ಕೆ ದುಡಿತದ ದಿನಗಳನ್ನು 200ಕ್ಕೆ ಹೆಚ್ಚಿಸಬೇಕು ಇವೇ ಮುಂತಾದ ಬೇಡಿಕೆಗಳ ಈಡೇರಿಕೆಗಾಗಿ ಪ್ರತಿಭಟನಾಕಾರರು ಸರ್ಕಾರವನ್ನು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾರುತಿ ಚಿಟಗಿ, ಮೈಬು ಹವಲ್ದಾರ, ಹನಮಂತ ಮಾದರ, ಮುತ್ತಪ್ಪ ಚಲವಾದಿ, ಶಾರದಾ ರೋಣದ, ಶಾರದಾ ಹಳೆಮನಿ, ಗಿರಿಜಾ ಮಾಚಕನೂರ, ಅಕ್ಕಮ್ಮ ನೆರೆಗಲ್ಲ ಜ್ಯೋತಿ ಹಿರೇಮಠ, ಸುಶಿಲಾ ಚಲವಾದಿ, ಕಮಲಾಕ್ಷಿ ಬಿಳಗಿ, ಗಂಗಮ್ಮ ದೇವರಡ್ಡಿ, ಮಂಗಲಾ ಪಟ್ಟಣಶೆಟ್ಟಿ ಗೀತಾ ಪಾಟೀಲ, ನೀಲಮ್ಮ ಹಿರೇಮಠ, ವಾಲಿ, ಯಶೋದಾ ಬೇಟಗೆರಿ, ನಾಗರತ್ನ ಬಡಗನ್ನವರ, ವಿಜಯಲಕ್ಷ್ಮೀ, ಪ್ರೇಮಾ, ಹಾಲಪ್ಪ ತಾಂಬ್ರಗುಂಡಿ ಮುಂತಾದವರು ಉಪಸ್ಥಿತರಿದ್ದರು.

### ಕನ್ನಡ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ

# ಕನ್ನಡ ಕಲಿಕಾ ಕೇಂದ್ರ ಆರಂಭಿಸಲು ಸಿದ್ಧ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕನ್ನಡಕ್ಕಾಗಿ ಹೋರಾಟ ನಡೆಸಿದವರ ಮೇಲೆ ಪೊಲೀಸ್ ಪ್ರಕರಣಗಳು ದಾಖಲಾಗಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ನೀಡಲಾಗುವುದು. ಪೊಲೀಸ್ ಮತ್ತು ಜಿಲ್ಲಾಡಳಿತ ಈ ಕುರಿತು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ವರದಿ ಸಲ್ಲಿಸಬೇಕೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಹೇಳಿದರು.

ಅವರು ಬುಧವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಗಂಣದಲ್ಲಿ ಕನ್ನಡ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ಮಾತನಾಡಿದರು.

ಗೋಕಾಕ ಚಳುವಳಿಯ ಸ್ಮರಣೆಗಾಗಿ ಹುಬ್ಬಳ್ಳಿಯ ಗಬ್ಬೂರ ಬೈಪಾಸ್ ಹತ್ತಿರ ಇರುವ ಸರ್ಕಲ್‌ನಲ್ಲಿ ಡಾ. ರಾಜಕುಮಾರ ಅವರ ಸ್ಮಾರಕವನ್ನು ನಿರ್ಮಿಸಬೇಕು ಎಂಬುದು ಕನ್ನಡಪರ ಹೋರಾಟಗಾರರ ಬೇಡಿಕೆಯಾಗಿದೆ. ಈ ಕುರಿತು ಸರ್ಕಾರಕ್ಕೆ ನಿಯಮಾನುಸಾರ ಪ್ರಸ್ತಾವನೆಯನ್ನು ಸಲ್ಲಿಸಲಾಗುತ್ತದೆ ಎಂದು ಹೇಳಿದರು.

ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಕನ್ನಡ ಉದ್ಯೋಗಿಗಳ ಸಂಖ್ಯೆ ಕಡಿಮೆ ಇರುವದರಿಂದ ಗ್ರಾಹಕರಿಗೆ ಭಾಷೆಯ ಸಮಸ್ಯೆ ಉಂಟಾಗುತ್ತಿದೆ. ಕೇಂದ್ರ ಸರ್ಕಾರ ಸ್ಥಳೀಯ ಶಾಖೆಗಳಲ್ಲಿ ಕರ್ತವ್ಯ ನಿರ್ವಹಿಸುವ ಬ್ಯಾಂಕ್ ಉದ್ಯೋಗಿಗಳಿಗೆ ಸ್ಥಳೀಯ ಭಾಷೆ, ವಿಶೇಷವಾಗಿ ಕನ್ನಡ ಕಲಿಕೆಯನ್ನು ಕಡ್ಡಾಯಗೊಳಿಸಿದೆ. ರಾಜ್ಯ ಸರ್ಕಾರ ಮತ್ತು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಈ ಹಿನ್ನೆಲೆಯಲ್ಲಿ ಅನೇಕ



ಕ್ರಮಗಳನ್ನು ಕೈಗೊಂಡಿದೆ. ರಾಜ್ಯದ ಎರಡು ಪ್ರಮುಖ ಕೇಂದ್ರಗಳಾಗಿರುವ ಧಾರವಾಡ ಮತ್ತು ಮೈಸೂರು ಭಾಗದಲ್ಲಿ ಕನ್ನಡ ಭಾಷೆಗೆ ಹಿನ್ನಡೆ, ಕುಸಿತವಾದರೆ, ಕರ್ನಾಟಕದಲ್ಲಿ ಕನ್ನಡ ಭಾಷೆಗೆ ತೊಂದರೆ ಆಗುತ್ತದೆ ಎಂದು ಹೇಳಿದರು.

ಅಗತ್ಯವಿದ್ದಲ್ಲಿ ಧಾರವಾಡ ಜಿಲ್ಲೆಯಲ್ಲಿ ಕನ್ನಡ ಕಲಿಕಾ ಕೇಂದ್ರವನ್ನು ಪ್ರಾಧಿಕಾರದಿಂದ ತೆರೆಯಲಾಗುತ್ತದೆ. ಇದರ ಸಂಪೂರ್ಣ ವೆಚ್ಚವನ್ನು ಕನ್ನಡ ಪ್ರಾಧಿಕಾರದಿಂದಲೇ ಭರಿಸಲಾಗುವುದು ಎಂದು ಡಾ. ಪುರುಷೋತ್ತಮ ಬಿಳಿಮಲೆ ಹೇಳಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಜಿಲ್ಲೆಯಲ್ಲಿ ಕನ್ನಡ ಭಾಷೆಯ ಅನುಷ್ಠಾನಕ್ಕೆ ಅಗತ್ಯ ಕ್ರಮ ವಹಿಸಲಾಗಿದೆ. ಮಹಾನಗರ ಪಾಲಿಕೆಯಿಂದ ವಾಣಿಜ್ಯ ಮಳಿಗೆಗಳಿಗೆ ಪರವಾನಿಗೆ ಪತ್ರ ನೀಡುವ ಸಂದರ್ಭದಲ್ಲಿ ಕಡ್ಡಾಯವಾಗಿ ಕನ್ನಡ ಬಳಸಲು ಮತ್ತು ತಮ್ಮ ಅಂಗಡಿಯ ನಾಮಫಲಕಗಳಲ್ಲಿ ಶೇ. 60ಕ್ಕಿಂತ ಹೆಚ್ಚು ಸ್ಥಳದಲ್ಲಿ ಕನ್ನಡ ಬಳಸಲು ಸೂಚಿಸಲಾಗುತ್ತದೆ. ಈ ಕುರಿತು ಪರಿಶೀಲಿಸಿ, ಸೂಕ್ತ ಕ್ರಮಕೈಗೊಳ್ಳಲು ಮಹಾನಗರ ಪಾಲಿಕೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ. ಮುಂದಿನ ತಿಂಗಳು ಈ ಕುರಿತು ಕನ್ನಡ ಅಭಿಯಾನ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲೆಯಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ನೋಂದಾಯಿಸುವ ವಿವಾಹಗಳಿಗೆ ನೀಡುವ ವಿವಾಹ ಪ್ರಮಾಣಪತ್ರವನ್ನು ಆಧಾರ್ ಕಾರ್ಡ್‌ನಲ್ಲಿ ಇರುವಂತೆ ಕನ್ನಡದೊಂದಿಗೆ ಇಂಗ್ಲೀಷ್ ಭಾಷೆಯನ್ನು ಬಳಸುವ ಕುರಿತು ಹೊರರಾಜ್ಯದವರಿಂದ ಮನವಿಗಳು ಸಲ್ಲಿಕೆಯಾಗಿದ್ದು, ಈ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಿ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ, ಸಭೆ ನಿರ್ವಹಿಸಿದರು. ವೇದಿಕೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯೆ ದ್ರಾಕ್ಷಾಯಿಣಿ ಹುಡೇದ, ಪ್ರಾಧಿಕಾರದ ಕಾರ್ಯದರ್ಶಿ ಡಾ. ಸಂತೋಷ ಹಾನಗಲ್, ಆಪ್ತ ಕಾರ್ಯದರ್ಶಿ ಮಣಿಕುಮಾರ, ಕನ್ನಡ ಸಾಹಿತ್ಯ ಪರಿಷತ್ತ ಅಧ್ಯಕ್ಷ ಡಾ. ಲಿಂಗರಾಜ ಅಂಗಡಿ ಇದ್ದರು.

> ಕರ್ನಾಟಕ ಸರ್ಕಾರದ ಆದೇಶದ ಪ್ರಕಾರ ಎಲ್ಲ ನಾಮಫಲಕಗಳಲ್ಲಿ ಶೇ. 60ರಷ್ಟು ಕನ್ನಡ ಇರಬೇಕು. ಆದರೆ ಅವಳಿ ನಗರದಲ್ಲಿ ನೋಡಿದಾಗ ಸರ್ಕಾರದ ಈ ನಿಯಮ ಸರಿಯಾಗಿ ಪಾಲನೆಯಾಗಿಲ್ಲ ಎಂಬುದು ಕಂಡುಬರುತ್ತಿದೆ. ಜಿಲ್ಲಾಡಳಿತ ಮತ್ತು ಮಹಾನಗರ ಪಾಲಿಕೆಯು ಈ ಕುರಿತು ಕ್ರಮವಹಿಸಿ, ಎಲ್ಲ ಪ್ರಕಾರದ ಅಂಗಡಿ, ಮುಂಗಟ್ಟುಗಳ ಹಾಗೂ ಇತರ ನಾಮಫಲಕಗಳಲ್ಲಿ ಶೇ. 60ರಷ್ಟು ಕನ್ನಡ ಅಕ್ಷರಗಳು ಇರುವಂತೆ ನೋಡಿಕೊಳ್ಳಬೇಕು.
>
> **- ಡಾ. ಪುರುಷೋತ್ತಮ ಬಿಳಿಮಲೆ.**
> **ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು.**

# ಕಡಕೋಳ ಗ್ರಾಮಕ್ಕೆ ಸಿಇಓ ಭರತ್ ಎಸ್ ಭೇಟಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ಕಡಕೋಳ ಗ್ರಾಮಕ್ಕೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಎಚ್‌ಡಿಎಫ್‌ಸಿ ಬ್ಯಾಂಕ್ ಸ್ಥಳದ ಪರಿಶೀಲನೆ, ಶಾಲಾ-ಕಾಲೇಜುಗಳಿಗೆ ಭೇಟಿ ಹಾಗೂ ವಿವಿಧ ಇಲಾಖೆಯ ವತಿಯಿಂದ ನಡೆಯುತ್ತಿರುವ ಕೆಲಸ-ಕಾರ್ಯಗಳನ್ನು ವೀಕ್ಷಣೆ ಮಾಡಿ, ಸರಕಾರದ ನಿಯಮಾನುಸಾರ ಸಮರ್ಪಕವಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಾ.ಪಂ ಇಓ ಆರ್.ವಿ. ದೊಡ್ಡಮನಿ, ತಿಪ್ಪಣ್ಣ ಕೊಂಚಿಗೇರಿ, ಗ್ರಾ.ಪಂ ಅಧ್ಯಕ್ಷೆ ಹೇಮಾ ಹರ್ಲಾಪೂರ, ಉಪಾಧ್ಯಕ್ಷೆ ಗಿರಿಜಾ ಲಮಾಣಿ, ಸದಸ್ಯರಾದ ನಿರ್ಮಲಾ ಅಡವಿ, ಬಸವ್ವ ಮಾದರ, ಸಿದ್ದಪ್ಪ ಮುಧೋಳ, ರುದ್ರಗೌಡ ಪಾಟೀಲ, ರಾಮಣ್ಣ ಹರ್ಲಾಪೂರ, ಕಾವೇರಿ ಕಟಗಿ, ಮಾರ್ತಾಂಡಪ್ಪ ಹರಿಜನ, ಶಿವಪ್ಪ ಕದಂ, ಕೃಷ್ಣಾ ಲಮಾಣಿ, ಜಯವ್ವ ಉಪ್ಪಾರ, ನೀಲಮ್ಮ ನೆರ್ತಿ, ಮಂಜುನಾಥ ಹಾವೇರಿ, ಪಿಡಿಓ ಸುಜಾತಾ ಕಪ್ಪಲಿ ಮುಂತಾದವರು ಉಪಸ್ಥಿತರಿದ್ದರು.

### ಶೂ-ಸಾಕ್ಸ್ ವಿತರಣೆಯಲ್ಲಿ ಸರಕಾರಿ ನಿಯಮ, ಪಾರದರ್ಶಕತೆ ಪಾಲನೆ ಕಡ್ಡಾಯ; ಜಿಲ್ಲಾಧಿಕಾರಿ ದಿವ್ಯ ಪ್ರಭು

# ಸಾರ್ವಜನಿಕವಾಗಿ ದೂರು ಬಂದಲ್ಲಿ ಸೂಕ್ತ ಕ್ರಮ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಸರಕಾರಿ ಶಾಲೆಗಳಲ್ಲಿ 1ರಿಂದ 10ನೇ ತರಗತಿವರೆಗೆ ವ್ಯಾಸಾಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2025-26ನೇ ಸಾಲಿಗೆ ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್ ವಿತರಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಆದೇಶಿಸಿದ್ದು, ಜೂ.21ರ ಸರಕಾರಿ ಆದೇಶದಲ್ಲಿ ತಿಳಿಸಿರುವ ಷರತ್ತು ಮತ್ತು ನಿಬಂಧನೆಗಳನ್ನು ಕಡ್ಡಾಯವಾಗಿ ಪಾಲಿಸಿ, ಪಾರದರ್ಶಕವಾಗಿ ಖರೀದಿಸಬೇಕು, ಸರಕಾರಿ ನಿಯಮ ಪಾಲನೆಯಲ್ಲಿ ಲೋಪವಾಗದಂತೆ ಇಲಾಖೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಸೂಚಿಸಿದರು.

ಅವರು ಮಂಗಳವಾರ ಸಂಜೆ ಜಿ.ಪಂ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವಿವಿಧ ಹಂತದ ಅಧಿಕಾರಿಗಳ ಸಭೆ ಜರುಗಿಸಿ ಮಾತನಾಡಿದರು.

ಸರಕಾರದ ಸೌಲಭ್ಯಗಳು



ವಿದ್ಯಾರ್ಥಿಗಳಿಗೆ ಸರಿಯಾಗಿ ತಲುಪಬೇಕು. ಸರಕಾರಿ ಶಾಲಾ ಮಕ್ಕಳಿಗೆ ಉಚಿತವಾಗಿ ನೀಡುವ ಸಮವಸ್ತ್ರ, ಪಠ್ಯಪುಸ್ತಕ ಮತ್ತು ಶೂ-ಸಾಕ್ಸ್ ಗುಣಮಟ್ಟದ್ದಾಗಿರಬೇಕು. ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್ ಖರೀದಿಗೆ ಅನುದಾನ ಎಸ್.ಡಿ.ಎಂ.ಸಿ ಖಾತೆಗೆ ನೇರವಾಗಿ ಜಮೆ ಆಗುತ್ತದೆ. ಇವುಗಳ ಖರೀದಿಗೆ ಅನುಸರಿಸುವ ಮಾರ್ಗಸೂಚಿ ಹಾಗೂ ಷರತ್ತು, ನಿಬಂಧನೆಗಳನ್ನು ಈಗಾಗಲೇ ಎಲ್ಲ ಶಾಲೆಗಳ ಮುಖ್ಯಸ್ಥರಿಗೆ ಕಳುಹಿಸಲಾಗಿದೆ. ಸಮಿತಿ ಸದಸ್ಯರಿಗೆ ಸುತ್ತೋಲೆ ಮಾಹಿತಿ, ಸೂಕ್ತ ತಿಳುವಳಿಕೆ ನೀಡಿ, ಪಾರದರ್ಶಕತೆ ಅನುಸರಿಸಬೇಕು ಎಂದು ಹೇಳಿದರು.

ಮಿಷನ್ ವಿದ್ಯಾಕಾಶಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಮತ್ತು ಜಿಲ್ಲೆಯ ಶೈಕ್ಷಣಿಕ ಸುಧಾರಣೆಗಾಗಿ ಜಿಲ್ಲಾಡಳಿತ ವಿವಿಧ ಕ್ರಮಗಳನ್ನು ಕೈಗೊಳ್ಳುತ್ತಿದೆ. ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರು ಶಾಲಾ ಅವಧಿಯಲ್ಲಿಯೇ ಶಾಲೆಯಲ್ಲಿ ಇದ್ದು, ವಿದ್ಯಾರ್ಥಿಗಳ ಕಲಿಕೆಯ ಬಗ್ಗೆ ಆಸಕ್ತಿ, ಕಾಳಜಿವಹಿಸುವುದು ಅತೀ ಜರೂರಿದೆ. ಆದ್ದರಿಂದ ಜಿಲ್ಲೆಯ ವಿವಿಧ ಕ್ಷೇತ್ರಶಿಕ್ಷಣಾಧಿಕಾರಿಗಳ ವ್ಯಾಪ್ತಿಯಲ್ಲಿ ಹೊಸದಾಗಿ ಪ್ರೌಢಾಲಾ ಶಿಕ್ಷಕರನ್ನು ಬಿಎಲ್‌ಓ ಆಗಿ ನಿಯೋಜಿಸಲಾಗುತ್ತಿದ್ದನ್ನು ನಿಲ್ಲಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ ಸಿಇಓ ಭುವನೇಶ ಪಾಟೀಲ ಮಾತನಾಡಿ, ಶೈಕ್ಷಣಿಕ ಸುಧಾರಣೆಗೆ ಸಮುದಾಯದ ಪಾಲ್ಗೊಳ್ಳುವಿಕೆ ಮುಖ್ಯವಾಗಿದೆ. ಮುಂದಿನ ದಿನಗಳಲ್ಲಿ ಪ್ರತಿ ತಾಲೂಕಿನಲ್ಲಿ ಎಲ್ಲ ಶಾಲೆಗಳ ಎಸ್.ಡಿ.ಎಂ.ಸಿ ಅಧ್ಯಕ್ಷರ, ಸದಸ್ಯರ, ಪಾಲಕರ ಸಮಿತಿ ಅಧ್ಯಕ್ಷರ ಹಾಗೂ ಇಲಾಖೆ ಅಧಿಕಾರಿಗಳ ಸಭೆ ಆಯೋಜಿಸಲಾಗುವುದು. ಬಿಇಓ, ಡಿಡಿಪಿಐ ಅವರು ಕಚೇರಿಯಲ್ಲಿ ಕಾಲ ಕಳೆಯದೆ ಶಾಲಾಗಳಿಗೆ ನಿರಂತರವಾಗಿ ಭೇಟಿ ನೀಡಿ, ಪರಿಶೀಲಿಸಬೇಕು. ಶಿಕ್ಷಕರ, ವಿದ್ಯಾರ್ಥಿಗಳ ಬಗ್ಗೆ ಗಮನಹರಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಸೇರಿದಂತೆ ಡಿಡಿಪಿಐ ಕಚೇರಿಯ ವಿವಿಧ ಅಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿಆರ್.ಪಿಗಳು, ಸಿಆರ್.ಪಿಗಳು, ಶಿಕ್ಷಣ ನಿರೀಕ್ಷಕರು ಮುಂತಾದವರಿದ್ದರು.

> ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮತ್ತು ಅಲ್ಪಸಂಖ್ಯಾತ ಸಮುದಾಯಗಳೊಂದಿಗೆ ಸಂಬಂಧಿಸಿದ ಇಲಾಖೆಗಳ ಸಹಯೋಗದಲ್ಲಿ ಸಭೆ ಜರುಗಿಸಿ, ಮಕ್ಕಳ ಶಾಲಾ ಹಾಜರಾತಿ ಹೆಚ್ಚಳಕ್ಕೆ ಮತ್ತು ಪರಿಣಾಮಕಾರಿಯಾಗಿ ಶೈಕ್ಷಣಿಕ ಚಟುವಟಿಕೆಗಳನ್ನು ಕೈಗೊಳ್ಳಲು ಸಮುದಾಯಗಳ ಸಹಕಾರ ಕೋರುತ್ತೇವೆ. ಈ ಕುರಿತು ಚರ್ಚಿಸಲು ವಿವಿಧ ಸಮುದಾಯಗಳೊಂದಿಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಪ್ರತ್ಯೇಕ ಸಭೆ ಅಯೋಜಿಸಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

## ವಿಶ್ವ ಪ್ರಾಣಿಜನ್ಯ ರೋಗಗಳ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ತಾಲೂಕಾ ಆರೋಗ್ಯಾಧಿಕಾರಿಗಳ ಕಚೇರಿ, ಉಪ ಸಂರಕ್ಷಣಾಧಿಕಾರಿಗಳ ಕಚೇರಿ ಪ್ರಾದೇಶಿಕ ವಿಭಾಗ, ವಲಯ ಅರಣ್ಯ ಅಧಿಕಾರಿಗಳ ಕಚೇರಿ ಮೃಗಾಲಯ ಗದಗ ಹಾಗೂ ಪ್ರಾ.ಆ. ಕೇಂದ್ರ ಹುಲಕೋಟಿ ಇವರ ಸಂಯುಕ್ತ ಆಶ್ರಯದಲ್ಲಿ ಬಿಂಕದಕಟ್ಟಿ ಮೃಗಾಲಯದಲ್ಲಿ ಮಂಗಳವಾರ ವಿಶ್ವ ಪ್ರಾಣಿಜನ್ಯ ರೋಗಗಳ ದಿನಾಚರಣೆಯನ್ನು ಆಚರಿಸಲಾಯಿತು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ ಮಾತನಾಡಿ, ನೈಸರ್ಗಿಕವಾಗಿ ಪ್ರಾಣಿ ಮತ್ತು ಮನುಷ್ಯ ಸಂಕುಲದ ನಡುವೆ ಪರಸ್ಪರ ರೋಗ ಹರಡುವ ಪ್ರಕ್ರಿಯೆ ಇದೆ. ಪ್ರಾಣಿಜನ್ಯ ರೋಗಗಳ ಸರಿಯಾದ ನಿರ್ವಹಣೆ ಆಗದಿದ್ದರೆ ಮನುಕುಲದ ಮೇಲೆ ಪರಿಣಾಮ ಬೀರಲಿದೆ ಎಂದರಲ್ಲದೆ, ಪ್ರಾಣಿಗಳಿಂದ ಮನುಷ್ಯನಿಗೆ ರೇಬಿಸ್, ಹಕ್ಕಿಜ್ವರ, ಹಂದಿಜ್ವರ, ಬ್ರುಸ್ಸೆಲಾ, ಅಂತ್ರಾಕ್ಸ್ ಮುಂತಾದ ರೋಗಗಳು ಹರಡುವುದರ ಬಗ್ಗೆ ಮಾಹಿತಿಯನ್ನು ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಪ್ರಾಣಿಜನ್ಯ ರೋಗಗಳಲ್ಲಿ ವಿಶೇಷವಾಗಿ ರೇಬಿಸ್ ಪ್ರಕರಣಗಳ ಅಪಾಯಕಾರಿ ಎಂದು ವಿವರಿಸಿ, ಜಿಲ್ಲೆಯಲ್ಲಿ ಎಲ್ಲ ಸರಕಾರಿ ಸಂಸ್ಥೆಗಳಲ್ಲಿ ರೇಬಿಸ್‌ಗೆ ಸಂಬಂಧಿಸಿದ ಲಸಿಕೆಗಳು ಉಚಿತವಾಗಿ ಸಿಗುವುದರ ಬಗ್ಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ಮೃಗಾಲಯದ ಮಹಾಂತೇಶ ಪೊಲೀಸ್‌ಪಾಟೀಲ್, ಎ.ಸಿ.ಎಫ್, ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು, ಗೀತಾ ಕಾಂಬ್ಳೆ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು, ಜಿಲ್ಲಾ ಸಮೀಕ್ಷಣಾ ಘಟಕದ ಅಧಿಕಾರಿಗಳು/ಸಿಬ್ಬಂದಿ ವರ್ಗದವರು ಹಾಜರಿದ್ದರು.


## ಹಣ ಅಕ್ರಮ ವರ್ಗಾವಣೆ ಪ್ರಕರಣ: ರಾಜ್ಯ ವಕ್ಫ್ ಮಂಡಳಿಗೆ 3.82 ಕೋಟಿ ರೂ. ಮರಳಿಸಿದ ಇಡಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯ ವಕ್ಫ್ ಮಂಡಳಿಗೆ ಸೇರಿದ 4 ಕೋಟಿ ರೂಪಾಯಿ ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಪ್ತಿ ಮಾಡಿದ್ದ 3.82 ಕೋಟಿ ರೂ. ಮೌಲ್ಯದ ಆಸ್ತಿಯನ್ನು ಜಾರಿ ನಿರ್ದೇಶನಾಲಯ (ಇಡಿ) ರಾಜ್ಯ ವಕ್ಫ್ ಮಂಡಳಿಗೆ ವಾಪಸ್ ನೀಡಿದೆ. ವಕ್ಫ್ ಮಂಡಳಿಯಿಂದ ಸ್ಥಿರ ಠೇವಣಿಗಾಗಿ ಬಿಡುಗಡೆಯಾಗಿದ್ದ ಹಣದಲ್ಲಿ ಮರ್ಸಿಡಿಸ್-ಬೆನ್ಜ್ ಕಾರು ಖರೀದಿಸಲಾಗಿತ್ತು ಮತ್ತು ಉಳಿದ ಹಣವನ್ನು ಕಂಪನಿಯೊಂದಕ್ಕೆ ವರ್ಗಾಯಿಸಲಾಗಿತ್ತು. ಈ ಸಂಬಂಧ ಇಡಿ ತನಿಖೆ ಕೈಗೊಂಡಿತ್ತು.

ಜುಲೈ 10, ಶಿಕ್ಷಣ ನೀಡಿದ ಗುರುಗಳನ್ನು ಪೂಜಿಸಿ, ಸ್ಮರಿಸುವ 'ಗುರು ಪೂರ್ಣಿಮೆ' ನಿಮಿತ್ತ ಲೇಖನ

# 'ಗುರು' ಜಗತ್ತಿನ ಮಹಾ ಬೆಳಕು



ಆಚಾರ್ಯ ದೇವೋ ಭವ ಎಂದೇ ಗುರುಗಳನ್ನು ಪೂಜಿಸಿ, ಗೌರವಿಸುವ, ಭವ್ಯ ಪರಂಪರೆಯನ್ನು ಬಿಂಬಿಸುವ ದೇಶ ನಮ್ಮದು. ಗುರು ಒಬ್ಬ ವ್ಯಕ್ತಿ ಅಥವಾ ಒಬ್ಬ ವ್ಯಕ್ತಿಯಿಂದ ಎಲ್ಲಾ ಭಯ ಮತ್ತು ಅಜ್ಞಾನವನ್ನು ಹೊರಹಾಕುವ ಮಾರ್ಗದರ್ಶಕ. ರಾಮಕೃಷ್ಣ ಪರಮಹಂಸರ ಮಾತಿನಲ್ಲಿ ಹೇಳುವುದಾದರೆ, 'ಅವನೊಬ್ಬನೇ ನಿಜವಾದ ಜ್ಞಾನದ ಬೆಳಕಿನಿಂದ ಬೆಳಗುವ ನಿಜವಾದ ಶಿಕ್ಷಕ'.

'ಗುರುವಿನ ಗುಲಾಮನಾಗುವ ತನಕ ದೊ-ರೆಯದಣ್ಣ ಮುಕುತಿ' ಎಂದು ದಾರ್ಶನಿಕ ಕವಿ ಪುರಂದರದಾಸರು ಹೇಳಿದ್ದಾರೆ. ಅಂದರೆ, ಏನೂ ತಿಳಿಯದ ಒಬ್ಬ ಸಾಮಾನ್ಯ ಮನುಷ್ಯನನ್ನು ಜೀವನದ ಮೌಲ್ಯಗಳು, ಜೀವನದ ಅರ್ಥ ಗುರಿ, ಆ ಗುರಿಯನ್ನು ಸಾಧಿಸಲು ಇರುವ ಮಾರ್ಗ ಮುಂತಾದವುಗಳನ್ನು ಗುರುವಿನ ಮಾರ್ಗದರ್ಶನವಿಲ್ಲದೆ ತಿಳಿಯಲು ಸಾಧ್ಯವಿಲ್ಲ. ಪ್ರತಿಯೊಬ್ಬರೂ ಜೀವನದಲ್ಲಿ ಅನೇಕ ಗುರುಗಳೊಂದಿಗೆ ಮುಖಾಮುಖಿ ಆಗುತ್ತಾರೆ. ಮೊದಲ ಗುರು ತಾಯಿ, ತಂದೆ. ನಂತರದ ಸ್ಥಾನವೇ ಶಾಲೆಯ ಗುರುಗಳು. ಶಾಲೆ, ಕಾಲೇಜು, ವಿಶ್ವ ವಿದ್ಯಾಲಯ... ಒಟ್ಟಿನಲ್ಲಿ ನಾವು ಎಷ್ಟು ವರ್ಷಗಳವರೆಗೂ ಕಲಿಯುವೆವೋ ಅಲ್ಲಿಯವರೆಗೂ ಅವರೆಲ್ಲರೂ ನಮಗೆ ದಾರಿದೀಪ.

ಸುಂದರ ಸಮಾಜದ ನಿರ್ಮಾತೃಗಳನ್ನು ಸೃಷ್ಟಿಸುವ ತೋಟದ ಮಾಲೀಕರೇ ನಮ್ಮ ಶಿಕ್ಷಕರು. ಸಮಾಜದ ಪ್ರತಿಯೊಬ್ಬ ಸಾಧಕನ ಹಿಂದೆ ಶಿಕ್ಷಕನ ಶ್ರಮ ಇರುತ್ತದೆ. ಮಕ್ಕಳ ಲಾಲನೆ-ಪಾಲನೆಯಲ್ಲಿ ತಾಯಿಯ ಪಾತ್ರ ಎಷ್ಟು ಮುಖ್ಯವೋ, ಮಕ್ಕಳ ಬೌದ್ಧಿಕ ಜ್ಞಾನವನ್ನು ವೃದ್ಧಿಸುವಲ್ಲಿ ಶಿಕ್ಷಕನ ಪಾತ್ರವೂ ಸಹ ಅಷ್ಟೇ ಮುಖ್ಯ. ಜಾತಿ, ಲಿಂಗ, ಧರ್ಮ, ಪ್ರಾಂತ್ಯಗಳನ್ನು ಲೆಕ್ಕಿಸದೆ ಎಲ್ಲಾ ಮಕ್ಕಳನ್ನು ಸಮಾನ ರೀತಿಯಲ್ಲಿ ನೋಡುವವನೇ ಆದರ್ಶ ಶಿಕ್ಷಕ.

ಮಕ್ಕಳ ಮನಸ್ಥಿತಿಯನ್ನು ಅರ್ಥಮಾಡಿಕೊಂಡು ಚಟುವಟಿಕೆ ಆಧಾರಿತ ಕಲಿಕಾ ಕ್ರಮವನ್ನು ರೂಢಿಸಿಕೊಂಡ ಶಿಕ್ಷಕ, ಮಕ್ಕಳಿಗೆ ಕಲಿಕೆಯ ಬಗ್ಗೆ ಆಸಕ್ತಿಯನ್ನು ಹೆಚ್ಚಿಸುವುದರ ಜೊತೆಗೆ ಅವರನ್ನು ಶಾಲೆಯತ್ತ ಆಕರ್ಷಿಸುತ್ತಾನೆ. ಶಿಕ್ಷಕನು ಕಲಿಸುವಿಕೆಗೆ ಬೇಲಿಹಾಕಿಕೊಂಡರೆ ಯಾವುದೇ ವ್ಯಕ್ತಿಯು ಪರಿಪೂರ್ಣ ಜ್ಞಾನವನ್ನು ಪಡೆಯಲು ಸಾಧ್ಯವಿಲ್ಲ.

ಗುರು ಪೂರ್ಣಿಮೆಯನ್ನು ವ್ಯಾಸ ಪೂರ್ಣಿಮಾ ಎಂದೂ ಕರೆಯಲಾಗುತ್ತದೆ ಮತ್ತು ಹಿಂದೂ ಮಹಾಕಾವ್ಯವಾದ ಮಹಾಭಾರತದ ಮಹಾನ್ ಋಷಿ ಮತ್ತು ಲೇಖಕರಾದ ವೇದವ್ಯಾಸರ ಜನ್ಮ ವಾರ್ಷಿಕೋತ್ಸವವನ್ನು ಆಚರಿಸಲಾಗುತ್ತದೆ. ಜ್ಞಾನ ಮತ್ತು ಬೋಧನೆಗಳ ಜೊತೆಗಿನ ಸಂಬಂಧದಿಂದಾಗಿ ಈ ಹಬ್ಬವನ್ನು ಜ್ಞಾನ ಪೂರ್ಣಿಮಾ ಎಂದೂ ಆಚರಿಸಲಾಗುತ್ತದೆ.

ಹಾಗೆಯೇ ನನ್ನ ಜೀವನದಲ್ಲಿ ಮುತ್ತಿನ ಅಕ್ಷರ ಪೋಣಿಸಿ ಸುಂದರ ಸರವಾಗುವಂತೆ ದಾರಿ ತೋರಿಸಿ, ಆಶೀರ್ವಾದದೊಂದಿಗೆ ಮಾರ್ಗದರ್ಶನ ನೀಡಿ, ನನ್ನ ಪಾಲಿನ ಗುರು ದೇವೋ ಮಹೇಶ್ವರರು ಇವರು. ಈ ಕುರಿತು ನನ್ನ ಬರವಣಿಗೆಯ ಮೂಲಕ ಗುರು ಪೂರ್ಣಿಮೆಯಂದು ಅವರಿಗೆ ಶಿರಸಾಷ್ಟಾಂಗ ನಮಸ್ಕಾರಗಳು.

ನಾನು ಸರ್ಕಾರಿ ಪ್ರಾಥಮಿಕ ಶಾಲೆ ರಾಮಗೇರಿಯಲ್ಲಿ ಕಲಿಕೆಯನ್ನು ಪ್ರಾರಂಭಿಸಿದೆ. ಧರುಬಾಯಿ ಪ್ರಧಾನ ಗುರುಗಳು ಮೂಲಾಕ್ಷರ ಕಲಿಸಿ, ನನ್ನ ಕಲಿಕೆಗೆ ಅಕ್ಷರ ಬುನಾದಿ ಒದಗಿಸಿದರು. ಮೂಲಾಕ್ಷರಗಳೊಂದಿಗೆ ಪದಗಳನ್ನು ಪೋಣಿಸಿ ಮಗ್ಗಿ ಓದಲು, ಬರೆಯಲು ಒತ್ತು ನೀಡಿದವರು ಕಳ್ಳಿಮನಿ ಗುರುಗಳು. ಅಕ್ಷರ ಪದಗಳಾಗಿ, ವಾಕ್ಯಗಳಾಗುವಂತೆ ಕನ್ನಡ ಮತ್ತು ಸಮಾಜ ವಿಷಯದ ಕಲಿಕೆಗೆ ಅನುಕೂಲಿಸಿದವರು ಎಸ್.ಎಸ್. ಮುಳುಗುಂದ ಗುರುಮಾತೆಯರು. ಗಣಿತದ ಮೂಲ ಕ್ರಿಯೆಗಳನ್ನು ಪ್ರಕೃತಿಯ ನಿದರ್ಶನಗಳ ಮೂಲಕ ಪ್ರತಿದಿನ ಬೆಳಗಿನ ಪ್ರಾರ್ಥನೆಯಲ್ಲಿ ಹೊಸದೊಂದು ಮಾಹಿತಿ ನೀಡುತ್ತಿದ್ದವರು ಹೊಳ್ಳಿ ಗುರುಗಳು.

ನಮ್ಮ ಹಳ್ಳಿಯಲ್ಲಿ ಇಂಗ್ಲೀಷ್ ಭಾಷೆಯನ್ನು ಪ್ರತಿ ಹಂತದಲ್ಲೂ ಸನ್ನಿವೇಶವನ್ನು ಬಳಸಿಕೊಂಡು ಆಂಗ್ಲ ಸರಳ ಶಬ್ದಗಳ ಮೂಲಕ ಕಲಿಯಲು ಪ್ರೇರಣೆ ನೀಡಿದವರು ನಮ್ಮ ಜೆ.ಎಸ್. ರಾಮಶೆಟ್ಟರ ಗುರುಗಳು. ನಮ್ಮ ಊರಿನ ಸರ್ಕಾರಿ ಪ್ರೌಢಶಾಲೆಗೆ ಪ್ರವೇಶ ಪಡೆದುಕೊಂಡಾಗ ಜಿ.ಸಿ. ಕೊಲಕಾರ ಗುರುಮಾತೆಯರು ನಮ್ಮ 8ನೇ ವರ್ಗದ ಶಿಕ್ಷಕರಾಗಿ ಇಂಗ್ಲೀಷ್ ಭಾಷೆಯನ್ನು ಸರಳವಾಕ್ಯಗಳ ಮೂಲಕ ಕಲಿಸಿದ ರೀತಿ ಇಂದಿಗೂ ಅಚ್ಚಳಿಯದಂತೆ ಉಳಿದಿದೆ.

ಅದೇ ರೀತಿ 10ನೇ ತರಗತಿಗೆ ಇಂಗ್ಲೀಷ್ ಬಗ್ಗೆ ಒಲವು ಮೂಡಿಸಿದವರು ಮುಳ್ಳೂಳ್ಳಿ ಗುರುಮಾತೆಯರು. ಕನ್ನಡ ಗದ್ಯ, ಪದ್ಯ ಮತ್ತು ಹಳಗನ್ನಡ ಸಾಹಿತ್ಯವನ್ನು ಹಾಗೂ ವ್ಯಾಕರಣ ಅಂಶಗಳನ್ನು ನಮ್ಮ ಮೆದುಳಿಗೆ ಮೇವು ನೀಡಿ, ಭೌಗೋಳಿಕ ನವ ನವೀನ ಅಂಶಗಳನ್ನು ಸಹ ಹೇಳಿಕೊಟ್ಟವರು ನಮ್ಮ ಎಮ್.ಬಿ. ಹೊಸಮನಿ ಗುರುಗಳು.

ಕನ್ನಡದಂತೆ ಅತ್ಯಂತ ಸರಳವಾಗಿ ನಮ್ಮ ರಾಷ್ಟ್ರಭಾಷೆಯಾದ ಹಿಂದಿ ಭಾಷೆಯಲ್ಲಿ ಪರಿಣಿತರನ್ನಾಗಿ ಮಾಡಿದವರು, ನಮ್ಮ ಪ್ರೀತಿಯ ಅಚ್ಚುಮೆಚ್ಚಿನ ಯು.ಎ. ಪುಲ್ಲಿ ಗುರುಗಳು. ಸಮಾಜ ವಿಷಯವನ್ನು ಅರ್ಥೈಸಿದವರು ಕಾಶೆಟ್ಟಿ ಗುರುಮಾತೆಯರು. ಕನ್ನಡ, ಸಮಾಜ ವಿಜ್ಞಾನದ ಬಗ್ಗೆ ಆಸಕ್ತಿ ಮೂಡಿಸುವ ಸದುದ್ದೇಶದಿಂದ ಅತಿ ಸರಳವಾಗಿ ನಮಗೆ ಪಾಠ ಬೋಧನೆ ಮಾಡಿದವರು ಎಸ್.ಬಿ. ಪೂಜಾರ ಗುರುಗಳು.

ಪ್ರತಿದಿನ ಹುಬ್ಬಳ್ಳಿಯಿಂದ ಬಂದು ವಿಜ್ಞಾನ ವಿಷಯದಲ್ಲಿ ದೂರದ ಚಂದ್ರ ಮತ್ತು ನಕ್ಷತ್ರಗಳನ್ನು ದೂರದರ್ಶಕ ಮೂಲಕ ನಮಗೆ ಸಮೀಪ ತೋರಿಸಿ, ಆ ವಿಷಯದಲ್ಲಿ ಆಸಕ್ತಿ ಹುಟ್ಟಿಸಿ, ಮೂಢನಂಬಿಕೆ ನಂಬುವ ಜನರಿಗೆ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ನಾಟಕ ಮಾಡಿಸಿದವರು ಮೀನಾಕ್ಷಿ ಮೇಡಮ್. ಸದೃಢವಾದ ದೇಹದಲ್ಲಿ ಸದೃಢ ಮನಸ್ಸು ನಿರ್ಮಾಣ ಮಾಡಲು ಅನೇಕ ಆಟಗಳನ್ನು ಆಡಲು ಅವಕಾಶ ಕಲ್ಪಿಸಿದವರು ಮಾದರ ಮತ್ತು ಜಿ.ಡಿ. ಕಲ್ಲಣ್ಣವರ ಗುರುಗಳು. ನಮ್ಮ ಸುತ್ತಲಿನ ಪ್ರಕೃತಿಯ ಮಡಿಲಿನ ಚಿತ್ರಗಳನ್ನು ನಮ್ಮ ವರ್ಗಕೋಣೆ ಮೂಲಕ ಕಣ್ಣು ಮುಂದೆ ತಂದವರು ನಾವಿ ಗುರುಗಳು.

ನಂತರ ಕಾಲೇಜು ಸೇರಲು ಆರ್ಥಿಕ ಸಹಾಯದೊಂದಿಗೆ ಪಿಯುಸಿಯಲ್ಲಿ ವಿಜ್ಞಾನ ವಿಭಾಗದಲ್ಲಿ ಅಧ್ಯಯನ ಮಾಡಲು ಬೆಳಕಾದವರು ನಮ್ಮ ಮಾವ, ಧಾರವಾಡದ ಕರ್ನಾಟಕ ಕಲಾ ಮಹಾವಿದ್ಯಾಲಯದ ನಿವೃತ್ತ ಪ್ರಾಂಶುಪಾಲರಾದ ಡಾ. ಬಿ.ಎಫ್. ಚಾಕಲಬ್ಬಿ ಗುರುಗಳು.



ಹೀಗೆ ಇಂದು ನಾನು ಶಿಕ್ಷಕ ವೃತ್ತಿ ಸೇರಲು ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಮಾರ್ಗದರ್ಶನ ಮಾಡಿದ ಎಲ್ಲಾ ಗುರುಗಳಿಗೆ ಹೃದಯಾಭಿನಂದನೆಯ ಧನ್ಯವಾದಗಳು.

**– ಬಸವರಾಜ ಎಮ್.ಯರಗುಪ್ಪಿ.**
ಶಿಕ್ಷಕರು, ರಾಮಗೇರಿ-ಲಕ್ಷ್ಮೇಶ್ವರ.

## ಗುರುವಿನ ಪಾದವ ನೆನೆದು...



ಜುಲೈ 10ರಂದು ವ್ಯಾಸ ಪೂರ್ಣಿಮಾ ಮತ್ತು ಗುರು ಪೂರ್ಣಿಮಾವನ್ನು ಆಚರಿಸುತ್ತಾರೆ. ವೇದವ್ಯಾಸರ ಜನ್ಮ ದಿನವನ್ನೇ ನಾವು ಗುರು ಪೂರ್ಣಿಮಾವೆಂದು ಆಚರಿಸುತ್ತೇವೆ. ಆಷಾಢ ಮಾಸದ ಹುಣ್ಣಿಮೆಯ ದಿನ ಗುರು ಪೂರ್ಣಿಮಾ ಆಚರಿಸಲಾಗುತ್ತದೆ.

ಗುರುಬ್ರಹ್ಮ ಗುರುವಿಷ್ಣು
ಗುರುದೇವೋ ಮಹೇಶ್ವರ
ಗುರುಸಾಕ್ಷಾತ್ ಪರಬ್ರಹ್ಮ
ತಸ್ಮೈ ಶ್ರೀ ಗುರುವೇ ನಮಃ

ಈ ಸಾಲುಗಳೇ ಗುರುವಿನ ಮಹತ್ವವನ್ನು ಸಂಪೂರ್ಣವಾಗಿ ತಿಳಿಸಿಬಿಡುತ್ತವೆ. ಎಲ್ಲಾ ಮಕ್ಕಳಿಗೂ ತಾಯಿ-ತಂದೆಯೇ ಮೊದಲ ಗುರು. ಮನೆ ಮೊದಲ ಪಾಠಶಾಲೆ. ತನ್ನ ಮಕ್ಕಳಿಗೆ ಮೊದಲನೆಯ ಶಿಕ್ಷಕಿ ತಾಯಿ. ಇಲ್ಲಿ ಗುರುವೇ ಎಲ್ಲವೂ ಮತ್ತು ಅವರಿಂದಲೇ ಎಲ್ಲವೂ ಅನ್ನುವುದು ಸ್ಪಷ್ಟವಾಗುತ್ತದೆ. ಗುರುವಿನ ಸ್ಥಾನ ತುಂಬಾ ಪವಿತ್ರವಾದದ್ದು, ಜವಬ್ದಾರಿಯುತವಾದದ್ದು. ಈ ಸಮಾಜಕ್ಕೆ ಉತ್ತಮ ನಾಗರಿಕರನ್ನು ಕೊಡುವ ಸೃಷ್ಟಿಕರ್ತರು ಗುರು.

ಮನುಷ್ಯನಾದ ಮೇಲೆ ತನ್ನ ಜೀವನದಲ್ಲಿ ಏನನ್ನಾದರೂ ಸಾಧಿಸಬೇಕೆಂದುಕೊಂಡಿರುತ್ತಾರೆ. ಗುರಿ ಎಷ್ಟು ಮುಖ್ಯವೋ ಅಷ್ಟೇ ಮುಖ್ಯವಾದವರು ಗುರು. 'ಮುಂದೆ ಗುರಿ ಇರಬೇಕು ಹಿಂದೆ ಗುರು ಇರಬೇಕು' ಎಂಬ ಗಾದೆಮಾತು ತುಂಬಾ ಅರ್ಥಪೂರ್ಣವಾಗಿದೆ. ವಿದ್ಯಾರ್ಥಿಗಳು ತಮ್ಮ ಗುರಿಯನ್ನು ತಲುಪಬೇಕೆಂದರೆ ಗುರುವಿನ ಸಲಹೆ, ಸಹಕಾರ ಮತ್ತು ಮಾರ್ಗದರ್ಶನ ಇರಲೇಬೇಕು.

ಗುರುಗಳ ಸಹಾಯದಿಂದ ಮಾತ್ರ ನಾವು ಅಂದುಕೊಂಡ ಗುರಿ ತಲುಪಬಹುದು. ಗುರುವೆಂದರೆ ಕೇವಲ ಶಿಕ್ಷಕರಲ್ಲ, ಜೀವನದಲ್ಲಿ ಸರಿಯಾದ ದಾರಿ ತೋರುವ ಪ್ರತಿಯೊಬ್ಬರೂ ಗುರುಗಳೇ. ಇಂತಹ ಎಲ್ಲಾ ಗುರುವೃಂದಕ್ಕೂ ಗುರು ಪೂರ್ಣಿಮೆಯ ಶುಭಾಶಯಗಳು.

**– ವಿ.ಎಂ.ಎಸ್. ಗೋಪಿ.**
ಬೆಂಗಳೂರು.

ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್‌ನಿಂದ ಶಾಲಾ ದತ್ತು ಕಾರ್ಯಕ್ರಮ

# ಸರ್ಕಾರಿ ಶಾಲೆಗಳ ಮಕ್ಕಳು ಬದುಕನ್ನು ಅರಿತವರು

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣ ಪಡೆದ ಮಕ್ಕಳು ಬದುಕನ್ನು ಅರಿತವರು. ಇಂತಹ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸರ್ಕಾರದ ಉಚಿತ ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳೊಂದಿಗೆ ಸಂಘ-ಸಂಸ್ಥೆಗಳು ಕೈಜೋಡಿಸಿ ಮಕ್ಕಳ ಉತ್ತಮ ಭವಿಷ್ಯಕ್ಕೆ ಸಹಕರಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟೆಪ್ಪನವರ ಹೇಳಿದರು. ಅವರು ಮಂಗಳವಾರ ಗದುಗಿನ ಸರ್ಕಾರಿ ಪ್ರಾಥಮಿಕ ಹೆಣ್ಣುಮಕ್ಕಳ ಶಾಲೆ ನಂ.2ರಲ್ಲಿ ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ 2025-2026ನೇ ಸಾಲಿಗೆ ಗದಗ ಶಹರದ ಸರ್ಕಾರಿ ಶಾಲೆಗಳ ದತ್ತು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ಅಧ್ಯಕ್ಷೆ ಅಶ್ವಿನಿ ಜಗತಾಪ ಮಾತನಾಡಿ, ಬೇಟಿ ಬಚಾವೋ-ಬೇಟಿ ಪಡಾವೋ ಎಂಬ ಧ್ಯೇಯದೊಂದಿಗೆ ಹೆಣ್ಣು ಮಗುವಿನ ಶೈಕ್ಷಣಿಕ ಬೆಳವಣಿಗೆಗೆ ಪ್ರೋತ್ಸಾಹ ನೀಡುವುದಕ್ಕಾಗಿ ಈ ಶಾಲೆಯನ್ನು ದತ್ತು ಪಡೆಯಲಾಗಿದೆ. ಮಕ್ಕಳಿಗೆ ವಿವಿಧ ಚಟುವಟಿಕೆ ಹಾಗೂ ಸ್ಪರ್ಧೆಗಳನ್ನು ಏರ್ಪಡಿಸಿ ಬಹುಮಾನ ವಿತರಿಸಲಾಗುವುದು. ಶಾಲೆಯ ಅಗತ್ಯತೆಗಳನ್ನು ಪೂರೈಸಲು ಪ್ರಯತ್ನಿಸಲಾಗುತ್ತಿದೆ ಎಂದರು.

ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್ ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಲವಾರು ರಚನಾತ್ಮಕ ಕಾರ್ಯಗಳನ್ನು ಹಮ್ಮಿಕೊಂಡು ಯಶಸ್ವಿಯಾಗಿದ್ದು, ಬಡ ಹಾಗೂ ಪ್ರತಿಭಾನ್ವಿತ ಮಕ್ಕಳನ್ನು ದತ್ತು ಪಡೆದು ಅವರ ಶೈಕ್ಷಣಿಕ ಅಭಿವೃದ್ಧಿಗೆ ಕೈಜೋಡಿಸುತ್ತಿರುವುದು ಅಭಿನಂದನೀಯ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸಂಪನ್ಮೂಲ ವ್ಯಕ್ತಿ ಮೊಹಮ್ಮದ್‌ಶಫಿ ಯರಗುಡಿ ಮಾತನಾಡಿ, ಇಂದಿನ ವಿದ್ಯಾರ್ಥಿಗಳಿಗೆ ಮೌಲ್ಯ ಶಿಕ್ಷಣದ ಅವಶ್ಯಕತೆಯಿದ್ದು, ವಿದ್ಯಾರ್ಥಿಗಳು ನ್ಯಾಯ, ನೀತಿ, ಮಾನವೀಯತೆ, ಆದರ್ಶ, ಸಹಕಾರ ಮನೋಭಾವನೆಗಳನ್ನು ಹೊಂದುವಲ್ಲಿ ಶಿಕ್ಷಣ ಇಲಾಖೆಯೊಂದಿಗೆ ಸಂಘ-ಸಂಸ್ಥೆಗಳು ಜೊತೆಗೂಡಿ ಮಕ್ಕಳಿಗೆ ಮೌಲ್ಯ ಶಿಕ್ಷಣವನ್ನು ನೀಡಬೇಕಿದೆ ಎಂದರು.

ಪ್ರಾಸ್ತಾವಿಕವಾಗಿ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಮಾತನಾಡಿ, ಸರ್ಕಾರಿ ಶಾಲೆಗಳ ಫಲಿತಾಂಶ, ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ, ಗುಣಾತ್ಮಕ ಶಿಕ್ಷಣ, ಫಲಪ್ರದವಾದ ಕಲಿಕೆ ಏರಿಕೆಯಾಗಿದ್ದು, ಇಲಾಖೆಯೊಂದಿಗೆ ಸಂಘ-ಸಂಸ್ಥೆಗಳು ಕೈಜೋಡಿಸಿ ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಮುಂದಾಗಬೇಕೆಂದರು. ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯೆ ಎಫ್. ಜೆ. ದಲಭಂಜನ ಮಾತನಾಡಿ, ಮಕ್ಕಳ ಗುಣಮಟ್ಟದ ಕಲಿಕೆ, ಶೈಕ್ಷಣಿಕ ಅಭಿವೃದ್ಧಿಯೇ ನಮ್ಮ ಧ್ಯೇಯವಾಗಿದ್ದು, ದಾನಿಗಳು, ಸಂಘ-ಸಂಸ್ಥೆಗಳು ಸರ್ಕಾರಿ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಸಹಾಯ ಮಾಡುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಕ್ಲಬ್‌ನ ಖಜಾಂಚಿ ಪುಷ್ಪಾ ಭಂಡಾರಿ ಪ್ರಾರ್ಥಿಸಿದರು. ಎಡಿಟರ್ ವೀಣಾ ಕಾವೇರಿ ಸ್ವಾಗತಿಸಿದರು. ಎಚ್.ಬಿ. ಬಂಡಿವಡ್ಡರ ನಿರೂಪಿಸಿದರು. ಕೊನೆಯಲ್ಲಿ ಕ್ಲಬ್‌ನ ಸಿ.ಪಿ.ಸಿ.ಸಿ ಮೀನಾಕ್ಷಿ ಕೊರವಣ್ಣವರ ವಂದಿಸಿದರು. ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆ ಏರ್ಪಡಿಸಿ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಶಿಲ್ಪಾ ಅಕ್ಕಿ, ವಿ.ಕೆ. ಪಾಟೀಲ, ವಿದ್ಯಾ ಕಬ್ಬರಗಿ, ಇಂದಿರಾಬಾಯಿ, ಸಿ.ಎಸ್. ನಾಗನೂರ, ಗೌರಮ್ಮ ಉಪಸ್ಥಿತರಿದ್ದರು.

## ಸಭಾಪತಿ ಬಸವರಾಜ ಹೊರಟ್ಟಿ ಅಧ್ಯಕ್ಷತೆಯಲ್ಲಿ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ವಿಧಾನ ಪರಿಷತ್‌ನ ಸಭಾಪತಿಯವರ ಆಪ್ತ ಕಾರ್ಯದರ್ಶಿ ಡಾ. ವಿಶ್ವನಾಥ್‌ರ ಸಭಾ ಸೂಚನೆ ಪತ್ರದ ಪ್ರಕಾರ ಸಭಾಪತಿ ಬಸವರಾಜ ಹೊರಟ್ಟಿಯವರ ಅಧ್ಯಕ್ಷತೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಆಯುಕ್ತ ತ್ರಿಲೋಕ ಚಂದ್ರ, ಬಿಸಿಯೂಟ ಯೋಜನೆ ಅಧಿಕಾರಿ ಪ್ರಕಾಶ ನಿಟ್ಟಾಲಿ, ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ 5 ಜಿಲ್ಲೆಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳ ಜೊತೆ ಸಭೆ ಜರುಗಿತು.

ಶೇ. 60ಕ್ಕಿಂತ ಕಡಿಮೆ ಫಲಿತಾಂಶ ಬಂದ ಶಿಕ್ಷಕರ ವಾರ್ಷಿಕ ವೇತನ ಭತ್ಯೆ ತಡೆಹಿಡಿಯುವುದು, ವೇತನ ಹಿಂಪಡೆಯುವುದು ಇತ್ಯಾದಿ ಅಂಶಗಳನ್ನು ಪರಿಶೀಲಿಸಿ ರದ್ದುಪಡಿಸಬೇಕು. ಸುಮಾರು 10 ವರ್ಷಗಳಿಂದ ಅನುದಾನಿತ ಶಾಲೆಗಳಲ್ಲಿ ತೆರವಾದ ಹುದ್ದೆಗಳನ್ನು ತುಂಬಲು ಅವಕಾಶ ನೀಡುವುದು, ಪದೇ ಪದೇ ಆನ್‌ಲೈನ್ ಕೆಲಸ, ಮಾಹಿತಿ ಪೂರೈಕೆ ಹಾಗೂ ಅನ್ಯ ಕಾರ್ಯಕ್ಕೆ ನಿಯೋಜನೆ ಮಾಡುತ್ತಿರುವದು ಇತ್ಯಾದಿ ವಿಚಾರಗಳು ಚರ್ಚೆಯಾದವು.

ಈ ಸಂದರ್ಭದಲ್ಲಿ ಸಭಾಪತಿಗಳ ಆಪ್ತ ಸಹಾಯಕ ಡಾ. ವಿಶ್ವನಾಥ, ವಿಶೇಷ ಕರ್ತವ್ಯ ಅಧಿಕಾರಿ ಡಾ. ಮಹೇಶ ವಾಳ್ವೇಕರ್, ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಆರ್. ಭಟ್, ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ.ಎಸ್. ಪಾಟೀಲ, ಹಾವೇರಿ ಜಿಲ್ಲಾಧ್ಯಕ್ಷ ಎಚ್.ಬಣಕಾರ, ಶಿರಸಿ ಅಧ್ಯಕ್ಷ ನಾರಾಯಣ ದೈಮನೆ, ಕಾರವಾರ ಜಿಲ್ಲಾ ಕಾರ್ಯದರ್ಶಿ ಎಲ್. ಎಂ. ಹೆಗಡೆ, ರಾಜ್ಯ ಜಿಲ್ಲಾ ಉಪಾಧ್ಯಕ್ಷ ಬೂದಪ್ಪ ಅಂಗಡಿ ಉಪಸ್ಥಿತರಿದ್ದರು.

## ಡಾ. ಯತೀಂದ್ರ ಸಿದ್ದರಾಮಯ್ಯರಿಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿಧಾನ ಪರಿಷತ್ ಸದಸ್ಯರಾದ ನಂತರ ಮೊದಲ ಬಾರಿಗೆ ನಗರಕ್ಕೆ ಆಗಮಿಸಿದ ಡಾ. ಯತೀಂದ್ರ ಸಿದ್ದರಾಮಯ್ಯ ಅವರನ್ನು ತಾಲೂಕಿನ ಅಡವಿಸೋಮಾಪುರ ಗ್ರಾಮದ ಗೋಣಿ ಬಸವೇಶ್ವರ ದೇವಸ್ಥಾನದ ಹತ್ತಿರ ಗ್ರಾಮದ ಗುರು-ಹಿರಿಯರು ಯುವಕರು ಸ್ವಾಗತಿಸಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನದ ಕಮಿಟಿ ಪ್ರಚಾರ ಸಮಿತಿ ಅಧ್ಯಕ್ಷ ಮಂಜುನಾಥ ಜಡಿ ಮಾತನಾಡಿ, ಗ್ರಾಮದಲ್ಲಿ ಗೋಣಿ ಬಸವೇಶ್ವರ ದೇವಸ್ಥಾನ ಜೀರ್ಣೋದ್ಧಾರಕ್ಕೆ ವಿಶೇಷ ಅನುದಾನ ನೀಡಬೇಕು ಎಂದು ಮನವಿ ಮಾಡಿದರು.

ಕಮಿಟಿಯ ಗೌರವಾಧ್ಯಕ್ಷ ಆನಂದಪ್ಪ ಪುರದ, ಅಧ್ಯಕ್ಷ ಲೆಂಕೆಪ್ಪ ಹೊಸಳ್ಳಿ, ಈರಪ್ಪ ದೊಡಮನಿ, ಸಂಗಪ್ಪ ಯೋಗಿ, ಹುಚ್ಚಿರಪ್ಪ ಹರ್ತಿ, ಅಂಬರೀಶ ಜಕ್ಕಮ್ಮನವರ, ರಮೇಶ ಹಂಡಿ, ಬೂದಪ್ಪ ರೂಡನವರ, ಜಾವೇದ್ ಮಿಶ್ರಿಕೋಟಿ, ಮಲ್ಲಪ್ಪ ಹೊಸಳ್ಳಿ, ಈರಪ್ಪ ಹರ್ತಿ, ಮಂಜುನಾಥ ನಾಗಾವಿ, ಸಿದ್ದಪ್ಪ ಸಿದ್ನೆಕೊಪ್ಪ, ಮಲ್ಲಪ್ಪ ಹಳ್ಳಿಕೇರಿ, ಮುತ್ತಪ್ಪ ಸೋಮನಕಟ್ಟಿ, ಮಹೇಶ ಹರ್ಲಾಪೂರ, ಹೇಮಣ್ಣ ಹೊಸಳ್ಳಿ, ಗೋಣೆಪ್ಪ ದುರ್ಗಣ್ಣವರ, ಮಲ್ಲಪ್ಪ ತಳವಾರ, ಅರವಿಂದಪ್ಪ ಚಕ್ರಣ್ಣವರ, ರಫೀಕ್ ಮುಲ್ಲಾನವರ, ಪರಶುರಾಮ ಜಡಿ ಮುಂತಾದವರು ಉಪಸ್ಥಿತರಿದ್ದರು.

ನವಂಬರ್ 23ರಂದು ಬುಕ್ಕಾಂಬುಧಿ ಕ್ಷೇತ್ರದಲ್ಲಿ ಲಿಂ. ಉಜ್ಜಯಿನಿ ಶ್ರೀಗಳ ಶುಭಾಗಮನ ಶತಮಾನೋತ್ಸವ

# ಪಂಚ ಪೀಠಗಳಿಗೆ ಮಹತ್ವಪೂರ್ಣ ಹಿನ್ನೆಲೆಯಿದೆ

■ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ

ಕಾರಣಿಕ ಯುಗಪುರುಷ, ಪರಮ ತಪಸ್ವಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಬುಕ್ಕಾಂಬುಧಿ ಬೆಟ್ಟಕ್ಕೆ ದಯಮಾಡಿಸಿ ನೂರು ವರುಷ ತುಂಬಿದ ಸವಿನೆನಪಿಗಾಗಿ ಬರಲಿರುವ ನವಂಬರ್ 23ರಂದು ಶುಭಾಗಮನ ಶತಮಾನೋತ್ಸವ ಸಮಾರಂಭ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಶ್ರೀಮದ್ ಉಜ್ಜಯಿನಿ ಜಗದ್ಗುರು ಸಿದ್ಧಲಿಂಗ ಶಿವಾಚಾರ್ಯ ಟ್ರಸ್ಟಿನ ಅಧ್ಯಕ್ಷರಾದ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಪ್ರಕಟಪಡಿಸಿದರು.



ತರೀಕೆರೆ ಕ್ಷೇತ್ರದ ಶಾಸಕ ಜಿ.ಹೆಚ್. ಶ್ರೀನಿವಾಸ ಮಾತನಾಡಿ, ನವಂಬರ್ 22ರಂದು ಬುಕ್ಕಾಂಬುಧಿ ಕ್ಷೇತ್ರದಲ್ಲಿ ಉಚಿತ ಸಾಮೂಹಿಕ ವಿವಾಹ ಸಮಾರಂಭ ಹಾಗೂ ಶ್ರೀ ಜಗದ್ಗುರು ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ ನೆರವೇರಿಸಲಾಗುವುದು. ಕಾರ್ಯಕ್ರಮದ ಯಶಸ್ವಿಗೆ ಎಲ್ಲರೂ ಸಹಕರಿಸಬೇಕೆಂದರು.

ಅವರು ಬುಕ್ಕಾಂಬುಧಿ ಬೆಟ್ಟದ ಮೇಲಿನ ತಪೋಕ್ಷೇತ್ರದಲ್ಲಿ ಶುಭಾಗಮನ ಶತಮಾನೋತ್ಸವ ಪೂರ್ವಭಾವಿ ಸಮಾಲೋಚನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಸಕಲ ಜೀವಾತ್ಮರಿಗೂ ಒಳಿತನ್ನೇ ಬಯಸಿದ ವೀರಶೈವ ಧರ್ಮದಲ್ಲಿ ಪಂಚ ಪೀಠಗಳಿಗೆ ಮಹತ್ವಪೂರ್ಣ ಹಿನ್ನೆಲೆಯಿದೆ. ಲೋಕಕಲ್ಯಾಣಕ್ಕಾಗಿ ಮತ್ತು ಜನಹಿತಕ್ಕಾಗಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು 3 ತಿಂಗಳ ಕಾಲ ತಪಸ್ಸು ಮಾಡಿ ಭಕ್ತರಿಗೆ ಬಂದ ಕಷ್ಟಗಳನ್ನು ಪರಿಹರಿಸಿದರು. ಅವರು ಮಾಡಿದ ತಪಸ್ಸು, ತೋರಿದ ದಾರಿ ಸರ್ವರಿಗೂ ಒಳ್ಳೆಯದನ್ನು ಉಂಟು ಮಾಡಿದೆ. ಅವರು ಬುಕ್ಕಾಂಬುಧಿ ಬೆಟ್ಟಕ್ಕೆ ದಯಮಾಡಿಸಿ ನೂರು ವರುಷ ತುಂಬಿದ ಸಂದರ್ಭದ ಸವಿನೆನಪಿಗಾಗಿ ಶುಭಾಗಮನ ಶತಮಾನೋತ್ಸವ ಸಮಾರಂಭ ಜರುಗಲಿದೆ. ಇದೇ ಸಂದರ್ಭದಲ್ಲಿ ಅವರ ಪವಿತ್ರ ಜೀವನ ಸಾಧನೆ-ಸಿದ್ಧಿಗಳನ್ನು ವಿವರಿಸುವ ಹಲವಾರು ವಿದ್ವಾಂಸರ ಲೇಖನಗಳನ್ನು ಒಳಗೊಂಡ ಸ್ಮರಣ ಸಂಚಿಕೆ ಹೊರತರಲಾಗುವುದು ಎಂದರು.

ಸಾನ್ನಿಧ್ಯ ವಹಿಸಿದ ಇಂದಿನ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಆಶೀರ್ವಚನ ನೀಡಿ, ಶ್ರೀ ಉಜ್ಜಯಿನಿ ಜಗದ್ಗುರು ಸದ್ಧರ್ಮ ಪೀಠದಿಂದ ಬುಕ್ಕಾಂಬುಧಿ ಬೆಟ್ಟದವರೆಗೆ ಪಾದಯಾತ್ರೆ ಕೈಗೊಳ್ಳುತ್ತೇವೆ. ಆ ಪಾದಯಾತ್ರೆಗೆ ಶ್ರೀ ರಂಭಾಪುರಿ ಜಗದ್ಗುರುಗಳು ದಯಮಾಡಿಸಿ ಚಾಲನೆ ನೀಡಿ ಉದ್ಘಾಟಿಸಬೇಕೆಂದು ಬಯಸಿದ ಉಜ್ಜಯಿನಿ ಜಗದ್ಗುರುಗಳು ದಾ-ರಿಯುದ್ದಕ್ಕೂ ಬರುವ ಗ್ರಾಮ, ನಗರಗಳಲ್ಲಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳವರ ಭವ್ಯ ಜೀವನ ದರ್ಶನ ಪ್ರವಚನ ನೆರವೇರಿಸುತ್ತಾ ಬರಲಾಗುತ್ತದೆ. ಸಾವಿರಾರು ಜನರು ಪಾದಯಾತ್ರೆಯಲ್ಲಿ ಪಾಲ್ಗೊಳ್ಳುವರೆಂದು ತಿಳಿಸಿದರು. ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು ಮತ್ತು ಹುಲಿಕೆರೆ ವಿರೂಪಾಕ್ಷಲಿಂಗ ಶಿವಾಚಾರ್ಯರು ನೇತೃತ್ವ ವಹಿಸಿದ್ದರು.

ಈ ಅಪೂರ್ವ ಸಮಾರಂಭದಲ್ಲಿ ಹುಣಸಘಟ್ಟ, ನಂದಿಪುರ, ಹಣ್ಣೆ, ಬೀರೂರು, ಕೆ.ಬಿದರೆ, ತಾವರೆಕೆರೆ, ಬಿಳಕಿ, ಬೇರುಗಂಡಿಮಠದ ಶ್ರೀಗಳು ಉಪಸ್ಥಿತರಿದ್ದರು. ಟ್ರಸ್ಟಿನ ಉಪಾಧ್ಯಕ್ಷ ವೀರಭದ್ರಪ್ಪ, ಕಾರ್ಯದರ್ಶಿ ಹೆಚ್.ಪಿ. ಸುರೇಶ್, ಟ್ರಸ್ಟಿನ ಪದಾಧಿಕಾರಿಗಳಲ್ಲದೇ ಲಿಂಗದಹಳ್ಳಿ ರವಿ, ಚಿಕ್ಕಮಗಳೂರು ಶಿವಾನಂದಸ್ವಾಮಿ, ಬೆಟ್ಟದಹಳ್ಳಿ ರವಿ, ಹಿರೇಕಾನವಂಗಲ ಕುಮಾರ್, ಅಜ್ಜಂಪುರ ಕೃಷ್ಣಮೂರ್ತಿ, ಶಂಬೈನೂರು ಆನಂದ, ಓಂ ಪ್ರಕಾಶ ಪಾಟೀಲ, ಎಸ್.ವಿ. ಗಂಗಾಧರಯ್ಯ, ಬಾವಿಕೆರೆ ಸೀತಾರಾಂ, ಗೌರಾಪುರ ಪ್ರಕಾಶ, ಚನ್ನಾಪುರ ಸಿದ್ಧೇಗೌಡ್ರು, ಚಿತ್ರದುರ್ಗದ ಕೆ.ಸಿ. ರುದ್ರೇಶ, ಉಜ್ಜನಿ ಚನ್ನವೀರಯ್ಯ, ಬಿ.ಶಿವಕುಮಾರ, ಉಜ್ಜನಿ ಸಿದ್ಧಲಿಂಗಸ್ವಾಮಿ, ಎಸ್.ಜಿ. ಮಹಾನುಭಾವಿಮಠ, ರವಿ, ಅನಿಲ್ ಕುಮಾರ್, ಬೀರೂರು ನವೀನ್ ಪಾಲ್ಗೊಂಡು ಜಗದ್ಗುರುಗಳಿಂದ ಆಶೀರ್ವಾದ ಪಡೆದರು. ಬಿ.ಮಹೇಶ್ವರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಎಂ. ಗುರುಮೂರ್ತಿ ಸ್ವಾಗತಿಸಿದರು. ಹೆಚ್.ಪಿ. ಮಲ್ಲಿಕಾರ್ಜುನ ನಿರೂಪಿಸಿದರು.

# ಹಿಂದೂ ಜನಜಾಗೃತಿ ಸಮಿತಿಯಿಂದ ಗುರುಪೂರ್ಣಿಮಾ

■ವಿಜಯಸಾಕ್ಷಿ ಸುದ್ದಿ, ಗದಗ



ರಾಷ್ಟ್ರಪ್ರೇಮವನ್ನು ಹೆಚ್ಚಿಸುವ ಗುರು ಪೂರ್ಣಿಯನ್ನು ಆಚರಿಸುವ ಉದ್ದೇಶದಿಂದ ಜುಲೈ 10ರಂದು ಹಿಂದೂ ಜನಜಾಗೃತಿ ಸಮಿತಿಯ ವತಿಯಿಂದ ಗದಗಿನ ಶ್ರೀ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಸಾಯಂಕಾಲ 5.30 ಗಂಟೆಗೆ ಗುರುಪೂರ್ಣಿಮಾ ಮಹೋತ್ಸವವನ್ನು ಆಯೋಜಿಸಲಾಗಿದೆ.

ಈ ಮಹೋತ್ಸವದಲ್ಲಿ ಶ್ರೀ ವ್ಯಾಸಪೂಜೆ ಮತ್ತು ಪ.ಪೂ. ಭಕ್ತರಾಜ ಮಹಾರಾಜರ ಭಾವಚಿತ್ರದ ಪೂಜೆ, ಸಂತರ ಸಂದೇಶ, ಕಿರುಚಿತ್ರ, ಸ್ವರಕ್ಷಣೆಯ ಪ್ರಾತ್ಯಕ್ಷಿಕೆಗಳು ಮತ್ತು ಸಾಮೂಹಿಕ ರಾಮನಾಮ ಜಪ ನಡೆಯಲಿದೆ. ವಿವಿಧ ಗಣ್ಯರ ವಿಚಾರಗಳು ಹಾಗೂ 'ರಾಷ್ಟ್ರ ಮತ್ತು ಧರ್ಮರಕ್ಷಣೆಗಾಗಿ ಸಾಧನೆ ಮತ್ತು ಯುದ್ಧಕಾಲೀನ ಕರ್ತವ್ಯ' ಎಂಬ ವಿಷಯದ ಕುರಿತು ಗಣ್ಯರ ವಿಶೇಷ ಮಾರ್ಗದರ್ಶನವೂ ಇರಲಿದೆ.

ದೇಶ-ವಿದೇಶಗಳ ಭಕ್ತರೂ ಗುರುಪೂರ್ಣಿಯ ಲಾಭ ಪಡೆಯಲು, ಹಿಂದೂ ಜನಜಾಗೃತಿ ಸಮಿತಿಯು ಇಂಗ್ಲಿಷ್, ಕನ್ನಡ, ತೆಲುಗು ಮತ್ತು ಬಂಗಾಳಿ ಭಾಷೆಗಳಲ್ಲಿ ಆನ್‌ಲೈನ್ ಗುರುಪೂರ್ಣಿಮಾ ಮಹೋತ್ಸವವನ್ನು ಹಮ್ಮಿಕೊಂಡಿದೆ. ಕನ್ನಡ ಭಾಷೆಯಲ್ಲಿ ಮಹೋತ್ಸವವು ಜುಲೈ 10ರಂದು ಸಂಜೆ 5 ಗಂಟೆಗೆ youtube.com/Hjskarnataka ಈ ಯೂಟ್ಯೂಬ್ ಲಿಂಕ್‌ನಲ್ಲಿ ನೇರ ಪ್ರಸಾರವಾಗಲಿದೆ ಎಂದು ಹಿಂದೂ ಜನಜಾಗೃತಿ ಸಮಿತಿಯ ವೆಂಕಟರಮಣ ನಾಯಕ್ ತಿಳಿಸಿದ್ದಾರೆ.

### 'ನನ್ನ ಶಾಲೆ ನನ್ನ ಕೊಡುಗೆ' ಕಾರ್ಯಕ್ರಮದಲ್ಲಿ ಟೈ-ಬೆಲ್ಟ್ ವಿತರಣೆ

# ಶಿಸ್ತು ನಮ್ಮ ಜೀವನ ಶೈಲಿಯ ಪ್ರತಿಬಿಂಬ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಶಿಸ್ತನ್ನು ರೂಢಿಸಿಕೊಳ್ಳಬೇಕು, ಇದರಿಂದ ಪ್ರತಿದಿನದ ಶೈಕ್ಷಣಿಕ ಹಾಗೂ ಬದುಕಿನ ಎಲ್ಲ ಕಾರ್ಯಗಳನ್ನು ಯಶಸ್ವಿ ಹಾಗೂ ಕ್ರಿಯಾಶೀಲತೆಯಿಂದ ನಿರ್ವಹಿಸಲು ಸಾಧ್ಯವಾಗುತ್ತದೆ. ಶಿಸ್ತು ನಮ್ಮ ಜೀವನ ಶೈಲಿಯನ್ನು ಪ್ರತಿಬಿಂಬಿಸುತ್ತದೆ ಎಂದು ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ ಹೇಳಿದರು.

ಅವರು ಬುಧವಾರ ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನಿಂದ ಗದುಗಿನ ಸರ್ಕಾರಿ ಕ.ಗಂ.ಮ ಶಾಲೆ ನಂ. 1ರಲ್ಲಿ 'ನನ್ನ ಶಾಲೆ ನನ್ನ ಕೊಡುಗೆ' ಕಾರ್ಯಕ್ರಮದನ್ವಯ ಗದುಗಿನ ನಿವೃತ್ತ ಗುರುಗಳಾದ ವೈ.ಆರ್. ಪಾಟೀಲರು ವಿದ್ಯಾರ್ಥಿಗಳಿಗೆ ದೇಣಿಗೆ ನೀಡಿದ ಟೈ-ಬೆಲ್ಟ್‌ಗಳನ್ನು ವಿತರಿಸಿ ಮಾತನಾಡಿದರು.



ಸರ್ಕಾರವು ಸರ್ಕಾರಿ ಶಾಲಾ ಮಕ್ಕಳಿಗಾಗಿ ನೀಡುವ ಹಲವಾರು ಸೌಲಭ್ಯಗಳೊಂದಿಗೆ ಸೇವಾ ಮನೋಭಾವದಿಂದ ಮಹನೀಯರಾದ ವೈ.ಆರ್. ಪಾಟೀಲರು ತಮ್ಮ ಮೊಮ್ಮಗಳಾದ ವಿದ್ಯಾರ್ಥಿನಿ ಯುಕ್ತಿ ರವಿರಾಜ ಪಾಟೀಲ ಅವರ ಹೆಸರಿನಲ್ಲಿ ಸರ್ಕಾರಿ ಶಾಲೆ ನಂ. 1 ಹಾಗೂ 11ರ ವಿದ್ಯಾರ್ಥಿಗಳಿಗೆ ಟೈ-ಬೆಲ್ಟ್‌ಗಳನ್ನು ಕೊಡುಗೆಯಾಗಿ ನೀಡಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಸಹಕರಿಸಿದ್ದಾರೆ. ದಾನಿಗಳು ಸ್ವಯಂ ಪ್ರೇರಣೆಯಿಂದ ಮುಂದೆ ಬಂದು ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಮುಂದಾಗಬೇಕೆಂದು ಮನವಿ ಮಾಡಿದರು.

ಲಯನ್ಸ್ ಕ್ಲಬ್ ಕಾರ್ಯದರ್ಶಿ ರಾಜಣ್ಣ ಮಲ್ಲಾಡದ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ದಿನಗಳಲ್ಲಿ ಮಕ್ಕಳು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಬೇಕು. ಓದಿನಲ್ಲಿ ಆಸಕ್ತಿ ವಹಿಸಿದರೆ ಯಶಸ್ಸು ಸಾಧ್ಯ. ಮುಖ್ಯವಾಗಿ ಶಿಸ್ತು ಅವಶ್ಯ ಎಂದರು.

ಲಯನ್ಸ್ ಕ್ಲಬ್‌ನ ಖಜಾಂಚಿ ರೇಣುಕಪ್ರಸಾದ ಹಿರೇಮಠ ಮಾತನಾಡಿ, ಮಕ್ಕಳು ಮೌಲ್ಯಾಧಾರಿತ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು ಉತ್ತಮ ವಿದ್ಯಾರ್ಥಿಗಳಾಗಬೇಕು. ಪ್ರತಿದಿನ ತಪ್ಪದೇ ಶಾಲೆಗೆ ಬರುವದು ಶಿಸ್ತು ರೂಢಿಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿ ಮೀನಾಕ್ಷಿ ಕೊರವಣ್ಣವರ ಮಾತನಾಡಿ, ಸರ್ಕಾರಿ ಶಾಲೆಗಳ ಮಕ್ಕಳಲ್ಲಿರುವ ಆತ್ಮೀಯತೆ ಅಮೋಘವಾದದ್ದು. ಕೆಲವೊಂದು ಸೌಲಭ್ಯಗಳು ಮಕ್ಕಳಿಗೆ ಇರಲಿಕ್ಕಿಲ್ಲ. ಅದಕ್ಕಾಗಿ ಸಂಘ-ಸಂಸ್ಥೆಗಳು ಸರ್ಕಾರಿ ಶಾಲೆಗಳಿಗೆ ಆಗಮಿಸಿ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪ್ರೇರಣೆ ನೀಡಬೇಕು ಎಂದರು.

ಪ್ರಾಸ್ತಾವಿಕವಾಗಿ ಲಯನ್ಸ್ ಕ್ಲಬ್‌ನ ಮಾಜಿ ಅಧ್ಯಕ್ಷ ರಮೇಶ ಶಿಗ್ಲಿ ಮಾತನಾಡಿ, ಸರ್ಕಾರಿ ಶಾಲೆಗಳಿಗೆ ಸರ್ಕಾರದ ಉಚಿತ ಸೌಲಭ್ಯಗಳೊಂದಿಗೆ ದಾನಿಗಳ ಸಹಾಯ-ಸಹಕಾರ ಅತ್ಯವಶ್ಯವಾಗಿದ್ದು, ಪ್ರತಿಯೊಬ್ಬರೂ ಸಹಾಯ ನೀಡಬೇಕು ಎಂದರು.

ವೇದಿಕೆಯ ಮೇಲೆ ಲಯನ್ಸ್ ಕ್ಲಬ್‌ನ ಲೇಡಿಸ್ ವಿಂಗ್ ಅಧ್ಯಕ್ಷೆ ಪೂಜಾ ಪಾಟೀಲ, ಮುಖ್ಯೋಪಾಧ್ಯಾಯೆ ಭಾರತಿ ಕುಲಕರ್ಣಿ, ವಿಜಯಲಕ್ಷ್ಮೀ ಜಕರಡ್ಡಿ ಉಪಸ್ಥಿತರಿದ್ದರು. ಎಫ್.ಎಸ್. ಹಿರೇಮಠ ಪ್ರಾರ್ಥಿಸಿದರು. ವಿಜಯಲಕ್ಷ್ಮೀ ಕುಂಠೋಜಿ ಸ್ವಾಗತಿಸಿದರು. ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ನಿರೂಪಿಸಿದರು. ಶೋಭಾ ವಗ್ಗಿ ವಂದಿಸಿದರು.

# ತಾಯಿಯ ಹೆಸರಲ್ಲೊಂದು ಗಿಡ ನೆಡಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಯಿಯ ಋಣ ತೀರಿಸಲು ಯಾರಿಂದಲೂ ಸಾಧ್ಯವಿಲ್ಲ. ಪ್ರತಿಯೊಬ್ಬರೂ ಅಮ್ಮನ ಹೆಸರಿನಲ್ಲಿ ಸಸಿ ನೆಟ್ಟು ಬೆಳೆಸಿ ಪ್ರಕೃತಿಗೆ ಕೊಡುಗೆ ನೀಡಬೇಕು ಎಂದು ಶಿರಹಟ್ಟಿ ಶಾಸಕರಾದ ಡಾ. ಚಂದ್ರು ಲಮಾಣಿ ಹೇಳಿದರು.

ಶಿರಹಟ್ಟಿ ತಾಲೂಕಿನ ಕಡಕೋಳ ಗ್ರಾಮದ ಬಸವ ಯೋಗ ಕೇಂದ್ರ ಆವರಣದಲ್ಲಿ ಮೇರಾ ಯುವ ಭಾರತ ಸಹಯೋಗದೊಂದಿಗೆ ಆಯೋಜಿಸಿದ್ದ 'ತಾಯಿಯ ಹೆಸರಿನಲ್ಲಿ ಒಂದು ವೃಕ್ಷ ಅಭಿಯಾನ' ಕಾರ್ಯಕ್ರಮದಲ್ಲಿ ಮಾತನಾಡಿ, ಪ್ರತಿಯೊಬ್ಬರೂ ತಾಯಿ ನೆನಪಿನಲ್ಲಿ ಒಂದು ಗಿಡ ನೆಟ್ಟು ಬೆಳೆಸಬೇಕು ಎಂದು ತಿಳಿಸಿದರು.

ತಾ.ಪಂ ಮಾಜಿ ಸದಸ್ಯ ತಿಪ್ಪಣ್ಣ ಕೊಂಚಿಗೇರಿ ಮಾತನಾಡಿ, ನಗರೀಕರಣದ ಹೆಸರಿನಲ್ಲಿ ಕಾಂಕ್ರೀಟ್ ಕಾಡು ಹೆಚ್ಚಾಗುತ್ತಿದೆ. ಪ್ರಸ್ತುತ ಪರಿಸರ ಉಳಿಸಿ, ಬೆಳೆಸಿ ಮುಂದಿನ ಪೀಳಿಗೆಗೆ ಕಾಪಾಡಿಕೊಂಡು ಹೋಗಬೇಕಾದ ಅನಿವಾರ್ಯತೆ ಇದೆ. ಪ್ರತಿಯೊಬ್ಬರೂ ಗಿಡ ಬೆಳೆಸಿ ಪರಿಸರ ಉಳಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರವಿ ಹೊಂಬಾಳೆ, ಅರುಣ್ ಬಾರಕೇರ, ಮಂಜುನಾಥ ಹರಲಾಪುರ, ಹನುಮಂತ ಹುಲ್ಲೂರು, ಶರಣು ಕೊಂಚಿಗೇರಿ, ಕಿರಣ ಹರ್ಲಾಪುರ, ವಿಶ್ವನಾಥ್ ಉಳ್ಳಾಗಡ್ಡಿ ಮುಂತಾದವರಿದ್ದರು.

### ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಪ್ರತಿಭಾ ಪುರಸ್ಕಾರ ಮಾಲಿಕೆ-8

# ವಿದ್ಯಾರ್ಥಿಗಳಿಗೆ ನಿರಂತರ ಅಧ್ಯಯನ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ನಿರಂತರ ಓದಿ ಮನನ ಮಾಡಿಕೊಳ್ಳಬೇಕು. ಎಸ್.ಎಸ್.ಎಲ್.ಸಿಯು ವಿದ್ಯಾರ್ಥಿಗಳ ಬದುಕಿನ ಮಹತ್ವದ ಘಟ್ಟ. ಮುಂದಿನ ವಿದ್ಯಾಭ್ಯಾಸಕ್ಕೆ ಸೇತುವೆಯಾಗಿ ಕಾರ್ಯನಿರ್ವಹಿಸುವ ಈ ಹಂತದಲ್ಲಿ ವಿದ್ಯಾರ್ಥಿಗಳು ಏಕ ಚಿತ್ತದಿಂದ ಶಿಕ್ಷಕರ ಭೋಧನೆಯನ್ನು ಅರ್ಥೈಸಿಕೊಂಡು, ಪ್ರತಿಭಾನ್ವಿತ ವಿದ್ಯಾರ್ಥಿಗಳಾಗಬೇಕೆಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.



ಅವರು ಮಂಗಳವಾರ ಗದಗ ತಾಲೂಕಿನ ಕೋಟುಮಚಗಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಮೊದಲ 5 ಸ್ಥಾನ ಪಡೆದ ಗದಗ ತಾಲೂಕಿನ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಕೊಡಮಾಡುವ ಪ್ರತಿಭಾ ಪುರಸ್ಕಾರ ವಿತರಣಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಪ್ರೌಢಶಾಲಾ ಹಂತವು ಮಕ್ಕಳಲ್ಲಿ ವಿಚಾರಣಾತ್ಮಕ ಮನೋಭಾವನೆಗಳನ್ನು ಕ್ರೋಢೀಕರಿಸುತ್ತದೆ. ಅದಕ್ಕಾಗಿ ಪ್ರತಿಯೊಂದು ವಿಷಯವಾರು ಅಭ್ಯಾಸವನ್ನು ತಿಳಿದು ಅರ್ಥೈಸಿಕೊಳ್ಳಬೇಕು. ನಸುಕಿನಲ್ಲಿ ಓದುವ ರೂಢಿ ಒಳ್ಳೆಯದು. ಬರೆಯುವ ರೂಢಿಯನ್ನು ಹೆಚ್ಚು ಮಾಡಬೇಕು ಎಂದರು.

ಪಾರಿತೋಷಕ ವಿತರಕರಾಗಿ ಆಗಮಿಸಿದ್ದ ಗದುಗಿನ ಜರ್ಮನ್ ಆಸ್ಪತ್ರೆಯ ವೈದ್ಯ ಡಾ. ಅಜಯರಾಜ್ ಮಾತನಾಡಿ, ಮಕ್ಕಳು ಮೊಬೈಲ್ ಹಾಗೂ ಟಿ.ವಿ ಗೀಳಿನಿಂದ ದೂರವಿರಬೇಕು. ದುಶ್ಚಟಗಳು ಮಕ್ಕಳನ್ನು ಅಪಾಯಕ್ಕೆ ತಳ್ಳುತ್ತವೆ. ಉತ್ತಮ ಸಹವಾಸ, ಪ್ರತಿಭಾನ್ವಿತ ವಿದ್ಯಾರ್ಥಿಗಳ ಒಡನಾಟ, ಉತ್ತಮ ಪುಸ್ತಕಗಳ ಓದು, ಸರಿಯಾದ ಆರೋಗ್ಯ ಕ್ರಮ ಅನುಸರಿಸಿದರೆ ವಿದ್ಯಾರ್ಥಿಗಳ ಓದು ಯಶಸ್ಸು ಆಗುವುದು. ಸಾಧಕರು ಎಲ್ಲಿದ್ದರೂ ಸನ್ಮಾನಿತರೇ. ಇಂದು ಪ್ರತಿಭಾನ್ವಿತ ಮಕ್ಕಳಿಗೆ ಅವರಿರುವ ಜಾಗಕ್ಕೆ ಬಂದು ಅಣ್ಣಿಗೇರಿ ಗುರುಗಳ ಪ್ರತಿಷ್ಠಾನದಿಂದ ಸನ್ಮಾನಿಸಿ ಗೌರವಿಸಲಾಗುತ್ತಿದೆ. ಮಕ್ಕಳು ಇವರನ್ನು ಮಾದರಿಯಾಗಿ ಇಟ್ಟುಕೊಂಡು ವಿದ್ಯಾಭ್ಯಾಸಗೈಯ್ಯಬೇಕೆಂದರು.

ಅಧ್ಯಕ್ಷತೆಯನ್ನು ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ವಿನಾಯಕ ಬಂಡಾ ವಹಿಸಿದ್ದರು. ಬಸಮ್ಮ ಗಾಣಿಗೇರ ಪ್ರಾರ್ಥಿಸಿದರು, ಎಂ.ಎ. ಹಿರೇಗೌಡ್ರ ಸ್ವಾಗತಿಸಿದರು. ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಎನ್.ಜಿ. ಕಟಗೇರಿ ನಿರೂಪಿಸಿದರು. ಕಾರ್ಯದರ್ಶಿ ಸುಭಾಸ್ ಬೆಟದೂರ ವಂದಿಸಿದರು.

ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಗದಗ ತಾಲೂಕಿನ ಕೋಟುಮಚಗಿಯ ಸರ್ಕಾರಿ ಪ್ರೌಢಶಾಲೆಯ ವಿಜಯಲಕ್ಷ್ಮೀ ಶಿಂಗ್ಟಾಲಕೇರಿ, ಐಶ್ವರ್ಯ ಹುಡೇದ, ಯಲ್ಲಮ್ಮ ಶಿಂಗಟಾಲಕೇರಿ, ಯಾಸ್ಮೀನಬಾನು ತಿನಕಾಶಿ, ದೀಪಾ ಹಕ್ಕಿ, ನೀರಲಗಿಯ ಸರ್ಕಾರಿ ಪ್ರೌಢಶಾಲೆಯ ತೇಜಸ್ವಿನಿ ಭಿಂಗಿ, ಭೂಮಿಕಾ ವೈಷ್ಣವಿ, ಪ್ರಶಾಂತ ಸಂದಿಗೋಡ, ವಿದ್ಯಾ ಮೇಗಲಮನಿ, ಭರಮವ್ವ ಹಡಗಲಿ, ದೀಪಿಕಾ ಪಾಟೀಲ, ಕಣಗಿನಹಾಳದ ಸರ್ಕಾರಿ ಪ್ರೌಢಶಾಲೆಯ ಸುನಿಯಾ ನದಾಫ್, ಪ್ರಶಾಂತ ಮಲ್ಲಶೆಟ್ಟಿ, ಕುಶಲ ಭಾವಿ, ಅಂಜಲಿ ಬೆನಕೊಪ್ಪ, ಭೂಮಿಕಾ ಗುರುವಡೆಯರ, ಕಣಗಿನಹಾಳದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಗೋಪಾಲ ಲಮಾಣಿ, ಮಹೇಶ ಲಮಾಣಿ, ಬೀರಪ್ಪ ಹುಲಿ, ಸೃಷ್ಟಿ ಕೊಂಚಿಗೇರಿ, ಶ್ರೀಕಾಂತ ಲಮಾಣಿ ಮುಂತಾದವರನ್ನು ಸನ್ಮಾನಿಸಲಾಯಿತು.

### ತೋಂಟದಾರ್ಯ ಮಠಕ್ಕೆ ಅಪರೂಪದ ಅನುಭವ ಮಂಟಪ ಫೋಟೋ ಸಲ್ಲಿಸಿದ ಬಸವರಾಜ ಹೊರಟ್ಟಿ

# ಅನುಭವ ಮಂಟಪ ಪ್ರಜಾಪ್ರಭುತ್ವದ ಬುನಾದಿ

■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿಯೇ ಬಸವಣ್ಣನವರು ಸ್ಥಾಪಿಸಿದ ಅನುಭವ ಮಂಟಪ ವಿಶ್ವದ ಮೊದಲ ಸಂಸತ್ತಿನ ಪರಿಕಲ್ಪನೆ ಎಂಬ ಹೆಗ್ಗಳಿಕೆ ಪಾತ್ರವಾಗಿದ್ದು, ಸಂಸದೀಯ ಪ್ರಜಾಪ್ರಭುತ್ವದ ಬುನಾದಿಯಾಗಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.



ಅವರು ಲಿಂಗಾಯತ ಪ್ರಗತಿಶೀಲ ಸಂಘದ ಆಶ್ರಯದಲ್ಲಿ 2753ನೇ ಶಿವಾನುಭವ ಕಾರ್ಯಕ್ರಮದಲ್ಲಿ ಆಯೋಜಿಸಿದ್ದ ಬಸವರಾಜ ಹೊರಟ್ಟಿಯವರ ಜೀವಮಾನದ ಸಾಧನೆ, ಸನ್ಮಾನ ಜೊತೆಗೆ ಅವರ ನಡೆದು ಬಂದ ದಾರಿಯ ಅವಲೋಕನ, ವಚನ ಸಾಹಿತ್ಯ ಪಿತಾಮಹ ಫ.ಗು. ಹಳಕಟ್ಟಿ ಹಾಗೂ ಪೂಜ್ಯಶ್ರೀ ಲಿಂಗಾನಂದ ಮಹಾಸ್ವಾಮಿಗಳ ಕುರಿತು ಏರ್ಪಡಿಸಿದ ವಿಶೇಷ ಶಿವಾನುಭವದಲ್ಲಿ ಸನ್ಮಾನ ಸ್ವೀಕರಿಸಿ, ತೋಂಟದಾರ್ಯ ಮಠಕ್ಕೆ ವಿಧಾನ ಪರಿಷತ್ತಿನ ಅನುಭವ ಮಂಟಪದ ಅಪರೂಪದ ಫೋಟೋವನ್ನು ನೀಡಿ ಮಾತನಾಡಿದರು.

12ನೇ ಶತಮಾನದಲ್ಲಿಯೇ ಸಮಾನತೆಗಾಗಿ ಬಸವಣ್ಣನವರು ಅನುಭವ ಮಂಟಪ ಸ್ಥಾಪಿಸಿ ಅಲ್ಲಿ ಎಲ್ಲ ಸಮುದಾಯದ ಪ್ರತಿನಿಧಿಗಳನ್ನು, ದಾರ್ಶನಿಕರನ್ನು, ಕವಿಗಳನ್ನು, ವಿದ್ವಾಂಸರನ್ನು, ಸಂತರನ್ನು ಸೇರಿಸಿಕೊಂಡು ಸಮ ಸಮಾಜ ಕಟ್ಟುವುದಕ್ಕಾಗಿ ಚಿಂತನೆ ಆರಂಭಿಸಿದ ಅದ್ಭುತ ವೇದಿಕೆಯಾಗಿತ್ತು ಎಂದರು.

ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಅನುಭವ ಮಂಟಪ ಫೋಟೋವನ್ನು ಸ್ವೀಕರಿಸಿ ಮಾತನಾಡಿ, 12ನೇ ಶತಮಾನದಲ್ಲಿಯೇ ಬಸವಣ್ಣನವರು ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬ ಆಶಯ ಹೊತ್ತು ತಮ್ಮ ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವದ ಪರಿಕಲ್ಪನೆಯನ್ನು ಅಂದೇ ನೀಡಿದ್ದರು.

ಇಂದು ಇಡೀ ಜಗತ್ತಿನಾದ್ಯಂತ ಪ್ರಜಾಪ್ರಭುತ್ವ ಜೀವಂತವಾಗಿದ್ದರೆ ಅದಕ್ಕೆ ಅಂದಿನ ಬಸವಣ್ಣನವರ ಅನುಭವ ಮಂಟಪ ಕಾರಣ. ಇಂತಹ ಅಪರೂಪದ ಫೋಟೋವನ್ನು ಕರ್ನಾಟಕ ವಿಧಾನ ಪರಿಷತ್ತಿನ ಮೂಲಕ ಮುದ್ರಣ ಮಾಡಿ ಎಲ್ಲ ಜನಪ್ರತಿನಿಧಿಗಳಿಗೆ, ವಿದ್ವಾಂಸರಿಗೆ, ಚಿಂತಕರಿಗೆ, ಸಾಹಿತಿಗಳಿಗೆ ತಲುಪಿಸುತ್ತಿದ್ದೇವೆ. ಅದರ ಭಾಗವಾಗಿ ಇಂದು ತೋಂಟದಾರ್ಯ ಮಠಕ್ಕೆ ಅರ್ಪಿಸಿದ್ದು ನನಗೆ ಖುಷಿ ತಂದಿದೆ ಎಂದು ಬಸವರಾಜ ಹೊರಟ್ಟಿ ಹೇಳಿದರು.

ಬಸವಣ್ಣನವರ ಆದರ್ಶಗಳನ್ನೇ ಮೈಗೂಡಿಸಿಕೊಂಡ ಸಭಾಪತಿ ಬಸವರಾಜ ಹೊರಟ್ಟಿಯವರ ತಮ್ಮ ಅರ್ಧ ಶತಮಾನದ ಸಾರ್ವಜನಿಕ ಬದುಕಿನಲ್ಲಿ ಒಂದೂ ಕಪ್ಪು ಚುಕ್ಕೆಯನ್ನು ಅಂಟಿಸಿಕೊಳ್ಳದೇ ಇದ್ದಿರುವುದು ಬಸವಣ್ಣನವರ ವಿಚಾರಗಳನ್ನು ಅಳವಡಿಸಿಕೊಂಡಿದ್ದಕ್ಕೆ ಸಾಧ್ಯವಾಗಿದೆ. ಅಪರೂಪದ ಅನುಭವ ಮಂಟಪದ ಫೋಟೋಗಳನ್ನು ನಾಡಿನ ತುಂಬೆಲ್ಲ ನೀಡುವ ಮೂಲಕ ಬಸವಣ್ಣನವರ ವಿಚಾರಗಳನ್ನು ಸಂಸತ್ತಿನ ಮಹತ್ವವನ್ನು ಸಾರುತ್ತಿರುವ ಹೊರಟ್ಟಿಯವರ ಕಾರ್ಯ ಅಭಿನಂದನಾರ್ಹ ಎಂದರು.

ಈ ಸಂದರ್ಭದಲ್ಲಿ ಡಾ. ಬಸವರಾಜ ಧಾರವಾಡ, ಪ್ರಾ. ಶಿವಾನಂದ ಪಟ್ಟಣಶೆಟ್ಟಿ, ಪ್ರಾ. ರಮೇಶ ಕಲ್ಲನಗೌಡ್ರ, ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ರವಿ ದಂಡಿನ, ಉದ್ದಿಮೆದಾರ ಅಶೋಕ ಜೈನ, ಎಸ್.ಎಂ. ಅಗಡಿ, ಕೊಟ್ರೇಶ ಅಂಗಡಿ, ಎಸ್.ಎಸ್. ಗಡ್ಡದ, ಹೆಚ್.ಡಿ. ಪೂಜಾರ, ರವಿ ಕೊಣ್ಣೂರು, ಎಂ.ಎಚ್. ಪೂಜಾರ, ಎಸ್.ಜಿ. ಕೋಲ್ಮಿ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡರ, ಉಪಾಧ್ಯಕ್ಷ ಉಮೇಶ ಪುರದ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಕೋಶಾಧ್ಯಕ್ಷ ಬಸವರಾಜ ಸಿ. ಕಾಡಪ್ಪನವರ, ಸಹ ಕಾರ್ಯದರ್ಶಿ ಸೋಮಶೇಖರ ಪುರಾಣಿಕ, ಸಂಘಟನಾ ಕಾರ್ಯದರ್ಶಿಗಳಾದ ಮಹೇಶ ಗಾಣಿಗೇರ, ನಾಗರಾಜ ಹಿರೇಮಠ, ಶಿವಾನುಭವ ಸಮಿತಿ ಚೇರಮನ್ ಆಯ್.ಬಿ. ಬೆನಕೊಪ್ಪ, ಶಿವಾನಂದ ಫ.ಹೊಂಬಳ ಮುಂತಾದವರು ಉಪಸ್ಥಿತರಿದ್ದರು. ವಿದ್ಯಾ ಪ್ರಭು ಗಂಜಿಹಾಳ ನಿರೂಪಿಸಿದರು.

# ಮಕ್ಕಳ ಸುರಕ್ಷತೆಗೆ ನಿಗಾ ವಹಿಸಲು ಸೂಚನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಶಾಲಾ ಕಟ್ಟಡ ಸೋರಿಕೆ ಕುರಿತು ಸಾರ್ವಜನಿಕ ದೂರಿನ ಹಿನ್ನೆಲೆಯಲ್ಲಿ ನಗರದ ಸರಸ್ವತಪುರದ ಸರಕಾರಿ ಹಿರಿಯ ಕನ್ನಡ ಪ್ರಾಥಮಿಕ ಶಾಲೆ ನಂ.9ಕ್ಕೆ ಮಂಗಳವಾರ ಸಂಜೆ ಜಿಲ್ಲಾಧಿಕಾರಿ ದಿವ್ಯ ಪ್ರಭು ದಿಢೀರ್ ಭೇಟಿ ನೀಡಿ, ಶಿಕ್ಷಕರ ಮತ್ತು ಮಕ್ಕಳ ಹಾಜರಾತಿ, ಶಾಲೆ ಕಟ್ಟಡ ಪರಿಶೀಲಿಸಿದರು.



ಪ್ರತಿ ತರಗತಿಗೆ ಹೋಗಿ, ವಿದ್ಯಾರ್ಥಿಗಳಿಗೆ ಸರಕಾರದಿಂದ ಉಚಿತವಾಗಿ ವಿತರಿಸಿರುವ ಸಮವಸ್ತ್ರ, ಪಠ್ಯಪುಸ್ತಕಗಳ ಬಗ್ಗೆ ವಿದ್ಯಾರ್ಥಿಗಳಿಂದ ಜಿಲ್ಲಾಧಿಕಾರಿಗಳು ಮಾಹಿತಿ ಪಡೆದುಕೊಂಡರು. ಕೆಲವು ವಿದ್ಯಾರ್ಥಿಗಳು ಸಮವಸ್ತ್ರ ಧರಿಸದಿರುವುದನ್ನು ಗಮನಿಸಿ, ನಾಳೆ ಬೆಳಿಗ್ಗೆ ಎಲ್ಲರಿಗೂ ಎರಡೂ ಜೊತೆ ಸಮವಸ್ತ್ರ ವಿತರಿಸಿ, ಖುದ್ದು ತಮ್ಮ ಕಚೇರಿಗೆ ಶಾಲಾ ಮುಖ್ಯಸ್ಥರು ಶಾಲಾ ಅವಧಿ ನಂತರ ಆಗಮಿಸಿ ಮಾಹಿತಿ ಸಲ್ಲಿಸಲು ಅವರು ಸೂಚಿಸಿದರು.

ಶಾಲೆಯಲ್ಲಿ ಸಮಯಕ್ಕೆ ಸರಿಯಾಗಿ ಶಿಕ್ಷಕರು ಹಾಜರಿದ್ದು, ಮಕ್ಕಳ ಹಾಜರಾತಿ ಖಚಿತಪಡಿಸಿಕೊಳ್ಳಬೇಕು. ಈ ಶಾಲೆಗೆ ಕೊಳಚೆ ಪ್ರದೇಶದ, ಹಿಂದುಳಿದ ಪ್ರದೇಶದ ಮಕ್ಕಳು ಹೆಚ್ಚು ದಾಖಲಾಗುವದರಿಂದ ಮಕ್ಕಳಿಗೆ ಉತ್ತಮ ಓದು, ಬರಹ ಕಲಿಸಬೇಕು. ಪ್ರತಿ ಕೋಣೆಯಲ್ಲಿ ಉತ್ತಮ ಗಾಳಿ, ಬೆಳಕು ಬರುವಂತೆ ನೋಡಿಕೊಳ್ಳಬೇಕು. ಶಾಲೆಯಲ್ಲಿ ಹಾಗೂ ಶಾಲೆಯ ಆವರಣದಲ್ಲಿ ಶಿಸ್ತು, ಸ್ವಚ್ಛತೆ ಕಾಪಾಡಬೇಕು ಎಂದರು.

ಸರಸ್ವತಪುರ ಶಾಲೆಯಲ್ಲಿ ಈಗ 139 ವಿದ್ಯಾರ್ಥಿಗಳ ದಾಖಲಾತಿ ಇದೆ. ಹಿಂದಿನ ದಾಖಲಾತಿಗಳನ್ನು ಪರಿಶೀಲಿಸಿದಾಗ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಕಡಿಮೆ ಆಗಿದೆ. ಏಳು ಜನ ಪೂರ್ಣಾವಧಿ ಶಿಕ್ಷಕರಿದ್ದಾರೆ. ಐದು ಕೋಣೆಗಳಿವೆ. ಹೆಚ್ಚುವರಿ ಕೋಣೆಗಳ ಸೌಲಭ್ಯ ಮಾಡಲಾಗುತ್ತಿದೆ. ಶಿಕ್ಷಕರು ಹೆಚ್ಚು ಕಾಳಜಿ ವಹಿಸಿ, ಕೆಲಸ ಮಾಡಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಸ್.ಎಸ್. ಕೆಳದಿಮಠ, ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ ಸಿಂದಗಿ, ಶಾಲೆಯ ಮುಖ್ಯ ಶಿಕ್ಷಕಿ ಭಾರತಿ ಹಲಕುರ್ಕಿ ಸೇರಿದಂತೆ ಶಿಕ್ಷಕರು ಇದ್ದರು.

# ಹೃದಯಾಘಾತದಿಂದ ಕೊನೆಯುಸಿರೆಳೆದ ಚಾಲಕ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಕೆಎಸ್‌ಆರ್‌ಟಿಸಿ ಘಟಕದಲ್ಲಿ ಸೇವೆ ಸಲ್ಲಿಸುತ್ತಿದ್ದ ಚಾಲಕ ಎಸ್.ಪಿ. ಲಕ್ಷ್ಮಣ (53) ತೀವ್ರ ಹೃದಯಾಘಾತದಿಂದ ಸಾವನ್ನಪ್ಪಿರುವ ಘಟನೆ ಮಂಗಳವಾರ ಜರುಗಿದೆ.



ಲಕ್ಷ್ಮೇಶ್ವರದ ಸಾರಿಗೆ ಘಟಕದಲ್ಲಿ ಸೇವೆ ಸಲ್ಲಿಸುತ್ತಿದ್ದ ಚಾಲಕ ಎಸ್.ಪಿ. ಲಕ್ಷ್ಮಣ ಅವರಿಗೆ ಮಂಗಳವಾರ ಸಂಜೆಯ ವೇಳೆಗೆ ಎದೆ ನೋವು ಕಾಣಿಸಿಕೊಂಡಿತ್ತು. ಕೂಡಲೇ ಸ್ಥಳಿಯ ಆಸ್ಪತ್ರೆಯಲ್ಲಿ ತುರ್ತು ಚಿಕಿತ್ಸೆ ಕೊಡಿಸಿ ಹುಬ್ಬಳ್ಳಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾರೆ.

ಲಕ್ಷ್ಮಣ ಮೂಲತಃ ಲಕ್ಷ್ಮೇಶ್ವರ ತಾಲೂಕಿನ ಗೋವಿನಕೊಪ್ಪ ಗ್ರಾಮದವರಾಗಿದ್ದು, ಕಳೆದ 24 ವರ್ಷಗಳಿಂದ ಸಾರಿಗೆ ಸಂಸ್ಥೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಸತತ 15 ವರ್ಷಗಳ ಕಾಲ ಅಪಘಾತ ರಹಿತ ಚಾಲನೆಗೆ ಮುಖ್ಯಮಂತ್ರಿಗಳ ಬಂಗಾರದ ಪದಕಕ್ಕೆ ಭಾಜನರಾಗಿದ್ದರು. ಅಪ್ಪಟ ಕನ್ನಡ ಪ್ರೇಮಿಯಾಗಿದ್ದ ಅವರು ಪ್ರತಿವರ್ಷ ರಾಜ್ಯೋತ್ಸವದ ದಿನ ಬಸ್ಸನ್ನು ಕನ್ನಡದ ತೇರನ್ನಾಗಿ ಸಿಂಗರಿಸುತ್ತಿದ್ದರು. ಇವರ ಅಕಾಲಿಕ ನಿಧನಕ್ಕೆ ಸಾರಿಗೆ ಘಟಕದ ಅಧಿಕಾರಿ ಮತ್ತು ಸಿಬ್ಬಂದಿಗಳು ಕಂಬನಿ ಮಿಡಿದಿದ್ದಾರೆ. ಮೃತರಿಗೆ ಪತ್ನಿ, ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವಿದೆ. ರಾಜ್ಯದಲ್ಲಿ ಹೆಚ್ಚುತ್ತಿರುವ ಹೃದಯಾಘಾತದ ಪ್ರಕರಣಗಳ ನಡುವೆ ಈ ಸಾವು ಆತಂಕ ಮೂಡಿಸಿದೆ.

# ನರೇಗಾ ಸಿಬ್ಬಂದಿಗಳ ಚಳುವಳಿಗೆ ಬೆಂಬಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವೇತನ ವಿಳಂಬ ಹಾಗೂ ಸೇವಾಭದ್ರತೆ ಕುರಿತಂತೆ ಲಕ್ಷ್ಮೇಶ್ವರ ತಾ.ಪಂ ಆವರಣದಲ್ಲಿ ಹಮ್ಮಿಕೊಂಡಿರುವ ಅಸಹಕಾರ ಚಳವಳಿಗೆ ನರೇಗಾ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಜಿಲ್ಲಾ ಅಧ್ಯಕ್ಷ ಸುರೇಶ ಬಾಳಿಕಾಯಿ ಮಂಗಳವಾರ ಬೆಂಬಲ ವ್ಯಕ್ತಪಡಿಸಿದರು.




ಈ ವೇಳೆ ಮಾತನಾಡಿದ ಅವರು, ನರೇಗಾ ಸಿಬ್ಬಂದಿಗಳು ವೇತನವಿಲ್ಲದೇ ಜೀವನ ನಡೆಸುವುದು ಕಷ್ಟಕರವಾಗಿದೆ. ಸೇವಾ ಭದ್ರತೆ-ಯೂ ಇಲ್ಲದ್ದರಿಂದ ಭವಿಷ್ಯದ ಚಿಂತೆ ಕಾಡುತ್ತಿದೆ. ರಾಜ್ಯ ಹಾಗೂ ಆಯುಕ್ತರ ಇಲಾಖೆಯಿಂದ ಬಂದ ಮಾಹಿತಿ ಪ್ರಕಾರ ಇನ್ನೆರಡು ದಿನಗಳಲ್ಲಿ ವೇತನ ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ. ವೇತನ ಆಗುವವರೆಗೂ ಅಸಹಕಾರ ಚಳುವಳಿಗೆ ನಮ್ಮ ಬೆಂಬಲ ಇರುತ್ತದೆ. ರಾಜ್ಯ ನರೇಗಾ ಸಂಘದ ನಿರ್ದೇಶನದಂತೆ ನಾವೆಲ್ಲರೂ ನಡೆಯಬೇಕಾಗುತ್ತದೆ ಎಂದು ಸಲಹೆ ನೀಡಿದರು.

ಇಲಾಖೆಯ ವೃಂದ ಸಂಘಗಳು, ಪಿಡಿಓ ಹಾಗೂ ಸೆಕ್ರೆಟರಿ ವೃಂದ ಸಂಘ, ಬಿಎಫ್ಟಿ ಸಂಘದ ಜಿಲ್ಲಾ ಸಂಘಟನಾ ಕಾರ್ಯದರ್ಶಿ, ಬಿಲ್ ಕಲೆಕ್ಟರ್ ಹಾಗೂ ಡಿಇಓ ಸಂಘದ ತಾಲೂಕಾ ಘಟಕಗಳು ಬೆಂಬಲ ನೀಡಿದವು.

ಈ ವೇಳೆ ಹರೀಶ ಸೊಬರದ, ಮೋಹನಕುಮಾರ ಹೊಂಬಾಳ, ಮಂಜುನಾದಸ್ವಾಮಿ ಹಂಜಿಗಿಮಠ, ಶ್ರೀಧರ್ ಕುಲಕರ್ಣಿ, ಫಕೀರೇಶ ನಿಟ್ಪಾಲಿ, ಮಂಜುನಾಥ ತಳವಾರ, ಶ್ರೀನಿವಾಸ್ ಕಲಾಲ್, ಭರಮಗೌಡ್ರು, ಹುಲಿಗಪ್ಪ ಭಜಂತ್ರಿ, ಖಾಸಿಮಸಾಬ್ ನದಾಫ್, ಸತೀಶ ಅರಿಶಿಣದ, ತಿರುಕಪ್ಪ ಬಾಲೆಹೊಸೂರ, ಶಿಲ್ಪಾ ಲಮಾಣಿ, ಮಹಾಂತೇಶಗೌಡ ಪಾಟೀಲ, ಭಾರತಿ ಯಂಗಾಡಿ, ಶಿವಕ್ಕ ಮಾದರ, ಗಂಗವ್ವ ಹರಿಜನ, ಮಂಜುಳಾ ಕಟ್ಟಿಮನಿ, ನಿರ್ಮಲ ಚಿಣಗಿ, ಗೌರಮ್ಮ ಲಮಾಣಿ, ಪರಮೇಶ್ ಲಮಾಣಿ, ವಿನೋದ್ ಕುಮಾರ್ ಲಮಾಣಿ, ಭೀಮಪ್ಪ ರಾಥೋಡ, ಸೋಮು ತಳವಾರ ಪಾಲ್ಗೊಂಡಿದ್ದರು.

# ಗುರುಪೂರ್ಣಿಮೆ ಉತ್ಸವ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹುಡ್ಕೋ ಕಾಲೋನಿ ಆದರ್ಶ ನಗರದಲ್ಲಿರುವ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಗುರುಪೂರ್ಣಿಮೆ ಉತ್ಸವದ ನಿಮಿತ್ತ ಜು. 10ರಂದು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬೆಳಿಗ್ಗೆ 6 ಗಂಟೆಗೆ ಕಾಕಡಾರತಿ, ಮಂಗಳಸ್ನಾನ, ಪಂಚಾಮೃತ ಅಭಿಷೇಕ ಹಾಗೂ ವಿಶೇಷ ಅಲಂಕಾರ ಪೂಜೆ, ಆರತಿ ಜರುಗಲಿದ್ದು, 10 ಗಂಟೆಗೆ ಶ್ರೀ ಸಾಯಿ ಸತ್ಯನಾರಾಯಣ ಪೂಜೆ ಜರುಗಲಿದೆ. 12 ಗಂಟೆಗೆ ಮಹಾಪ್ರಸಾದ ಜರುಗಲಿದ್ದು, ಸಂಜೆ 6.30ಕ್ಕೆ ಧೂಪಾರತಿ, ಪ್ರಸಾದ ವಿತರಣೆ, 8 ಗಂಟೆಗೆ ಶೇಜಾರತಿಯೊಂದಿಗೆ ಉತ್ಸವ ಮಹಾಮಂಗಳ ಜರುಗಲಿದೆ ಎಂದು ಪ್ರಕಟಣೆ ತಿಳಿಸಿದೆ.

# ಕಮ್ಯೂನಿಟಿ ಮೊಬೈಲೈಜರ್ ಹುದ್ದೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ್ ಡೇ ಯೋಜನೆಯ ಸ್ವ ಸಹಾಯ ಸದಸ್ಯರುಗಳನ್ನು ಕಮ್ಯೂನಿಟಿ ಮೊಬೈಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದೆ. ಅರ್ಜಿ ಸಲ್ಲಿಸಲು ಜುಲೈ 14 ಕೊನೆಯ ದಿನವಾಗಿದ್ದು, ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಮುಖ್ಯಾಧಿಕಾರಿಗಳ ಕಾರ್ಯಾಲಯ, ಪುರಸಭೆ ಮುಂಡರಗಿ ದೂರವಾಣಿ ಸಂಖ್ಯೆ 08371–262638 ಇಲ್ಲಿ ಸಂಪರ್ಕಿಸಬಹುದಾಗಿದೆ.

### ಕರ್ನಾಟಕ ರಾಜ್ಯ ಗ್ರಾ.ಪಂ ನೌಕರರ ಸಂಘದ ವತಿಯಿಂದ ಬೇಡಿಕೆಗಳ ಈಡೇರಿಕೆಗಾಗಿ ಪ್ರತಿಭಟನೆ

# ಲೇಬರ್ ಕೋಡ್ ಜಾರಿಗೆ ವಿರೋಧ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘ (ಸಿ.ಐ.ಟಿ.ಯು) ಗದಗ ಜಿಲ್ಲೆ ವತಿಯಿಂದ ಲೇಬರ್ ಕೋಡ್ ಜಾರಿ ವಿರೋಧಿಸಿ, ಗ್ರಾಮ ಪಂಚಾಯಿತಿ ನೌಕರರ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ನಗರದ ಮಹಾತ್ಮ ಗಾಂಧಿ ಸರ್ಕಲ್‌ನಲ್ಲಿ ಪ್ರತಿಭಟನೆ ನಡೆಸಿ, ಗದಗ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಗ್ರಾ.ಪಂ ನೌಕರರ ಸಂಘದ ರಾಜ್ಯ ಸಮಿತಿ ಉಪಾಧ್ಯಕ್ಷ ರುದ್ರಪ್ಪ ಕಂದಗಲ್ಲ, ಕೇಂದ್ರ ಸರ್ಕಾರವು 2019–20ರ ಪಾರ್ಲಿಮೆಂಟ್‌ನಲ್ಲಿ ನಾಲ್ಕು ಲೇಬರ್ ಕೋಡ್‌ಗಳನ್ನು ಅಂಗೀಕರಿಸಿ, ಈ ಸಂಹಿತೆಗಳಲ್ಲಿರುವ ಹಲವು ಕಾರ್ಮಿಕ ವಿರೋಧಿ ಅಂಶಗಳನ್ನು ರಾಜ್ಯ ಸರ್ಕಾರಗಳ ಮೂಲಕ ಕಾರ್ಮಿಕ ಕಾನೂನುಗಳನ್ನು ತಿದ್ದುಪಡಿ ಮಾಡಿ ಜಾರಿಗೆ ತರುವ ಹಿಂಬಾಗಿಲಿನ ಪ್ರಯತ್ನವನ್ನು ಮಾಡುತ್ತಿದೆ.

ಈ ತಿದ್ದುಪಡಿಗಳು ಜಾರಿಯಾದಲ್ಲಿ ಗ್ರಾ.ಪಂಗಳಲ್ಲಿ ದುಡಿಯುತ್ತಿರುವ ಬಹುತೇಕ ನೌಕರರು ರಕ್ಷಣೆ ಕಳೆದುಕೊಂಡು ಅತಂತ್ರರಾಗಬೇಕಾಗುತ್ತದೆ. ಆದ ಕಾರಣ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ವತಿಯಿಂದ ರಾಜ್ಯಾದ್ಯಂತ ಈ ನಾಲ್ಕು ಲೇಬರ್ ಕೋಡ್‌ಗಳನ್ನು ಜಾರಿ ಮಾಡಬಾರದೆಂದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳನ್ನು ಈ ಪ್ರತಿಭಟನೆಯ ಮೂಲಕ ಒತ್ತಾಯಿಸುತ್ತಿದೆ ಎಂದರು.



ಈ ಸಂದರ್ಭದಲ್ಲಿ ಜಿಲ್ಲಾ ಮುಖಂಡರಾದ ರುದ್ರಗೌಡ ಸಂಕನಗೌಡ್ರ, ಸಿದ್ದಪ್ಪ ಶ್ಯಾಗೋಟಿ, ತಾಲೂಕು ಸಮಿತಿ ಅಧ್ಯಕ್ಷ ಮಹಾಂತೇಶ ದಡವಾಡ, ಕಾರ್ಯದರ್ಶಿ ಪ್ರಕಾಶ ಬೋಕಣ್ಣ, ಖಜಾಂಚಿ ಶಿವಾನಂದ ಚಲವಾದಿ, ನೀಲಮ್ಮ ಭಾರದ್ವಾಡ, ಉಪಾಧ್ಯಕ್ಷ ದೇವಪ್ಪ ಕಲ್ಮನಿ, ರುಕ್ಮೀಣಿ ಮಿನಗನವರ, ಶಾರದಾ ಹುನಗುಂದ, ಬಸಯ್ಯ ಜಂಗಮಠ, ಈಶ್ವರ ಪಟ್ಟಣಶೆಟ್ಟಿ, ಮಂಜುನಾಥ ಹೊಂಬಳ, ಹನುಮಂತ ಹೊಂಬಳ, ರಮೇಶ ಲಮಾಣಿ, ಗಿರೀಶ ಮುಕ್ಕಣ್ಣವರ, ಅಶ್ವಿನಿ ದಳವಾಯಿ, ಅಕ್ಕಮ್ಮ ಜಗ್ಗಲ, ರಾಮಣ್ಣ ಮ್ಯಾಗೇರಿ, ಶಿವಯೋಗಿ ನಂದಿಕೋಲಮಠ, ಮುತ್ತಪ್ಪ ತಳಕಲ್ಲ, ಅಲ್ಲಾಭಕ್ಷಿ ಹಳ್ಳಿಕೇರಿ, ಚಂದ್ರು ಗಾಜಿ ಇನ್ನಿತರರು ಉಪಸ್ಥಿತರಿದ್ದರು.

> ಗ್ರಾಮ ಪಂಚಾಯಿತಿ ನೌಕರರ ಪ್ರಮುಖ ಬೇಡಿಕೆಗಳಾದ ಕನಿಷ್ಠ ವೇತನ ಕರಡು ಅಧಿಸೂಚನೆಯಲ್ಲಿ ರೂ. 31,000 ನಿಗದಿಪಡಿಸಬೇಕು, ಸೇವಾ ಹಿರಿತನ ಭತ್ಯೆ ಹೆಚ್ಚಳ, ಪಿಂಚಣಿ, ಆರೋಗ್ಯ ವಿಮೆ ಜಾರಿ, ಪಂಚಾಯಿತಿಗೊಂದು ಎಸ್.ಡಿ.ಎ ಮತ್ತು ಎರಡನೇ ಡಿ.ಇ.ಓ ನೇಮಕಾತಿ, ಸ್ವಚ್ಛವಾಹಿನಿಯರ ಒಡಂಬಡಿಕೆ ರದ್ದು, ತರಬೇತಿ ಪಡೆದ ಎಲ್ಲರಿಗೂ ಕಡ್ಡಾಯ ಕೆಲಸ, ರೂ. 7500 ಗೌರವ ಧನ ನೀಡುವಂತೆ ಪ್ರತಿಭಟನಾಕಾರರು ಸರ್ಕಾರವನ್ನು ಒತ್ತಾಯಿಸಿದರು.

### ಬಸವದಳದ ಶರಣ ಸಂಗಮ ಕಾರ್ಯಕ್ರಮದಲ್ಲಿ ಉರಿಲಿಂಗ ಪೆದ್ದಿ ಶರಣರ ವಚನ ಚಿಂತನ

# ತನ್ನ ತಾ ಅರಿತವನೇ ಗುರು

■ ವಿಜಯಸಾಕ್ಷಿ ಸುದ್ದಿ, ಗದಗ

ಬಸವಣ್ಣನವರ ಅನುಭವ ಮಂಟಪದಲ್ಲಿ ಮೇಲು, ತಳ ವರ್ಗದ ಶರಣರೆಲ್ಲರ ಮಿಳಿತವಾಗಿತ್ತು. ಅಲ್ಲಿ ನಡೆಯುತ್ತಿದ್ದ ಚಿಂತನ–ಮಂಥನಗಳಿಂದ ಸರ್ವರಲ್ಲೂ ಸಮಾನತ್ವ ಮೂಡಿ ತಳವರ್ಗದ ಶರಣರೂ ಆಧ್ಯಾತ್ಮಿಗಳಾಗಿ ಹೊರಹೊಮ್ಮಿದರು. ಅವರಲ್ಲಿ ಉರಿಲಿಂಗ ಪೆದ್ದಿ ಎನ್ನುವ ಕಳ್ಳತನ ಮಾಡುವಾತನೂ ಬಸವಣ್ಣನವರ ಪ್ರಭಾವಕ್ಕೊಳಗಾಗಿ ಶರಣನಾಗಿ ಬದಲಾಗಿದ್ದ. ಎಂಥ ಪಂಡಿತರೂ ನಿಬ್ಬೆರಗಾಗುವಂತಹ ಅನೇಕ ವಚನಗಳನ್ನು ಆತ ರಚಿಸಿದ್ದಾನೆ ಎಂದು ಅನುಭಾವಿ ನಿಂಗನಗೌಡ ಹಿರೇಸಕ್ಕರಗೌಡರು ನುಡಿದರು.

ಅವರು ಬಸವದಳದ 1653ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ 'ಉರಿಲಿಂಗ ಪೆದ್ದಿ ಶರಣರ ವಚನ' ಕುರಿತ ಚಿಂತನ ಕಾರ್ಯಕ್ರಮದಲ್ಲಿ ಮಾತನಾಡಿದರು.




ಇದು ತುಂಬ ದೊಡ್ಡ ವಚನವಾಗಿದ್ದರೂ ಉರಿಲಿಂಗ ಪೆದ್ದಿಯ ವಿಚಾರಶೀಲತೆ, ಜ್ಞಾನದ ಮಿಳಿತ ತತ್ವವೇ ಆಗಿದೆ. ತನ್ನನ್ನು ತಾನು ಯಾರು ಅರಿಯುತ್ತಾರೋ ಅವರೇ ಗುರುವಾಗಬಲ್ಲರು. ಯೋಗವೆಂದರೆ ಬರೀ ಉಸಿರು ತೆಗೆದುಕೊಳ್ಳುವುದು, ನಿಲ್ಲಿಸುವುದು (ಕುಂಭಕ) ಮತ್ತು ಹೊರಗೆ ಉಸಿರು ಚೆಲ್ಲುವುದಲ್ಲ. ಶರಣರು ಇಂಥ ಯೋಗ ತಿರಸ್ಕರಿಸಿದರು. ತನ್ನಲ್ಲಿರುವ ಚೈತನ್ಯವೇ–ಜೀವಾತ್ಮ. ಎಲ್ಲರಲ್ಲಿರುವ, ಎಲ್ಲದರಲ್ಲಿರುವ ಅಂದರೆ ಭೂಮಿ, ನೀರು, ಅಗ್ನಿ, ವಾಯು ಮತ್ತು ಆಕಾಶ ಈ ಪಂಚ ಭೂತಗಳಲ್ಲಿರುವ, ಸಕಲ ಬ್ರಹ್ಮಾಂಡಗಳಿಗೆ ಅನುವಾಗಿರುವ ಚೈತನ್ಯವೇ ಪರಮಾತ್ಮ ಆಗಿದೆ ಎಂದರು.

ಈ ಚೈತನ್ಯದೊಳಗೇ ಎಲ್ಲರ ಚೈತನ್ಯ ಅಡಗಿದೆ. ನಮ್ಮ ಚೈತನ್ಯ ಜೀವಾತ್ಮವಾದರೆ ಎಲ್ಲರ, ಎಲ್ಲವುಗಳ ಚೈತನ್ಯವೇ ಪರಮಾತ್ಮವಾಗಿದೆ. ಪರಮಾತ್ಮಕ್ಕೆ ಪರ್ಯಾವಾದ ಶಬ್ದವೇ ಪರಬ್ರಹ್ಮವಾಗಿದೆ. ನಾನು ನಾನು, ನನ್ನೊಳಗೇ ಮನೆ ಮಾಡಿರುವ ಆಸೆ–ಆಮಿಷಗಳು, ಪಂಚ ಜ್ಞಾನೇಂದ್ರಿಯಗಳ, ಕರ್ಮೇಂದ್ರಿಗಳ, ಕಾಮ–ಕ್ರೋಧ ಮುಂ–ಗಳು, ಅಹಂಕಾರ–ಮಮಕಾರಗಳೆಂಬ ಅಷ್ಟ ಮದಗಳು ನಮ್ಮನ್ನು ಆಳುತ್ತಿರುವುದೇ ಮಾಯಾಸಂಬಂಧವಾಗಿದೆ. ಪರಮ ಸತ್ಯ ಒಂದೇ ಆಗಿದೆ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಶರಣ ಎಸ್.ಎನ್. ಹಕಾರಿ ಗುರುಗಳು ಉರಿಲಿಂಗಪೆದ್ದಿಯ ಕಥೆ ಹೇಳುತ್ತಾ, ಎಲ್ಲರೂ ನಿಜವಾದ ಅರಿವಿನಿಂದ ಬಾಳಬೇಕು. ವಿಶ್ವಗುರು ಬಸವಣ್ಣನವರಾದಿ ಎಲ್ಲ ಶರಣರ ಸದಾಶಯದಂತೆ ನಡೆಯೋಣವೆಂದು ತಿಳಿಸಿದರು.


ಕಾರ್ಯದರ್ಶಿ ಶರಣ ಜಿನಗಾ ಪ್ರಾರ್ಥಿಸಿದರು. ಶರಣೆ ನೀಲಲೋಚನೆ ಹಂಚಿನಾಳ ಶರಣು ಸಮರ್ಪಣೆ ಮಾಡಿದರು. ಶರಣ ರಾಮಣ್ಣ ಕಳ್ಳಿಮನಿ ಕಾರ್ಯಕ್ರಮ ನಿರೂಪಿಸಿದರು.

> ಅತಿಥಿಗಳಾದ ಶರಣ ಶಿವಣ್ಣ ಮುಗದ ಮಾತನಾಡುತ್ತಾ, ನೀರಲ್ಲಿಯೇ ಮೀನು ಇದೆ. ಹಾಗೆಯೇ ಆ ಪರಾತ್ಪರ ವಸ್ತು ಒಂದೇ ಇದೆ. ಅದರೊಳಗೇ ನಾವಿದ್ದೇವೆ. ನಾವು ಯಾರೂ ಬೇರೆ ಬೇರೆ ಅಲ್ಲ. ಎಲ್ಲರೂ ಒಂದೇ ಆಗಿದ್ದೇವೆ. ಅರಿವು ಆಗದ್ದಕ್ಕೆ, ಅಜ್ಞಾನದಲ್ಲಿದ್ದಾಗ ಭಿನ್ನತೆ ಇರುತ್ತದೆ ಎಂದು ಹೇಳಿದರು.

# ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರಕ್ಕೆ ಪುಸ್ತಕ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯು 'ತ್ರಿಭಾಷಾ ಕವಿ' ಗುರು ಪುಟ್ಟರಾಜರ ಸಾಹಿತ್ಯ ಸೇವೆಯನ್ನು ಸ್ಮರಿಸಿಕೊಳ್ಳುವ ಘನ ಉದ್ದೇಶದಿಂದ, ಕಳೆದ 23 ವರ್ಷಗಳಿಂದಲೂ 'ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರ' ರಾಜ್ಯ ಪ್ರಶಸ್ತಿ ನೀಡುತ್ತಾ ಬಂದಿದೆ. ಅದರಂತೆ ಈ ವರ್ಷವೂ ಕೂಡಾ ಪ್ರಶಸ್ತಿಗಾಗಿ 2024–25ನೇ ಸಾಲಿನಲ್ಲಿ ಪ್ರಕಟವಾದ ಕನ್ನಡ, ಹಿಂದಿ ಮತ್ತು ಸಂಸ್ಕೃತ ಭಾಷೆಯ ಸಾಹಿತ್ಯದ ಎಲ್ಲಾ ಪ್ರಕಾರಗಳ ಕೃತಿಗಳನ್ನು ಆಹ್ವಾನಿಸಲಾಗಿದೆ. ಆದರೆ, ಈ ಪ್ರಶಸ್ತಿಗೆ ಕನ್ನಡದ ಕೃತಿಗಳನ್ನು ಮಾತ್ರ ಆಯ್ಕೆ ಮಾಡಲಾಗುವುದು. ಹಿಂದಿ ಮತ್ತು ಸಂಸ್ಕೃತ ಕೃತಿಗಳಲ್ಲಿ ಉತ್ತಮ ಕೃತಿ ಆಯ್ಕೆಮಾಡಿ ಉತ್ತಮ ಕೃತಿಕಾರರಿಗೆ ಪುಟ್ಟರಾಜ ಸಾಹಿತ್ಯ ಸಮ್ಮಾನ ನೀಡಲಾಗುವದು.



ಪ್ರಶಸ್ತಿಯು 5 ಸಾವಿರ ರೂ ನಗದು, ಸ್ಮರಣಿಕೆ ಮತ್ತು ಪ್ರಶಸ್ತಿ ಪತ್ರವನ್ನು ಒಳಗೊಂಡಿದೆ. ಪ್ರಶಸ್ತಿಗೆ ಆಯ್ಕೆಯಾದ ಸಾಹಿತಿಗಳಿಗೆ ದಾಂಡೇಲಿಯಲ್ಲಿ ಹಮ್ಮಿಕೊಂಡಿರುವ ಡಾ. ಪಂ. ಪುಟ್ಟರಾಜರ ಪುಣ್ಯಸ್ಮರಣೋತ್ಸವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಇದೇ ಸಂದರ್ಭದಲ್ಲಿ ಪ್ರಶಸ್ತಿಗೆ ಸಮೀಪದ ಪ್ರತಿಸ್ಪರ್ಧಿಯಾದ ವಿವಿಧ ಪ್ರಕಾರದ 10 ಕೃತಿಗಳನ್ನು ಗುರುತಿಸಿ ವರ್ಷದ ಶ್ರೇಷ್ಠ ಕೃತಿರತ್ನ ಸಮ್ಮಾನ ನೀಡಿ ಗೌರವಿಸಲಾಗುವುದು ಎಂದು ಸೇವಾ ಸಮಿತಿಯ ರಾಜ್ಯ ಸಂಚಾಲಕರು ಮತ್ತು ಸಾಹಿತ್ಯ ಪುರಸ್ಕಾರ ಆಯ್ಕೆ ಸಮಿತಿಯ ಸದಸ್ಯ ಸಂಚಾಲಕರೂ ಆಗಿರುವ ಡಾ. ಸುಮಾ ಹಡಪದ ಹಳಿಯಾಳ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತ ಲೇಖಕರು ತಮ್ಮ ಭಾವಚಿತ್ರ ಸಹಿತ ಪರಿಚಯ ಪತ್ರ, ಎಪ್ರಿಲ್ 1, 2024ರಿಂದ 2025 ಮಾರ್ಚ್ 31ರ ಒಳಗಾಗಿ ಪ್ರಕಟವಾದ 3 ಕೃತಿಗಳೊಂದಿಗೆ ಆಗಸ್ಟ್ 15ರ ಒಳಗಾಗಿ ತಲುಪುವಂತೆ ಸಿ. ಕೆ. ಹೆಚ್ ಶಾಸ್ತ್ರೀ (ಕಡಣಿ) ಸದಸ್ಯರು, ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರ ಪ್ರಶಸ್ತಿ ಆಯ್ಕೆ ಸಮಿತಿ, 'ಸಮನ್ವಯ' # 332, ಕೆ.ಹೆಚ್.ಬಿ ಕಾಲೋನಿ, ರಾಜೀವಗಾಂಧಿ ನಗರ, ಗದಗ–582101 (ವಾಟ್ಸಪ್–9886717732) ಇಲ್ಲಿಗೆ ತಲುಪುವಂತೆ ಕಳಿಸಲು ಕೋರಲಾಗಿದೆ.

# ಇನ್ನರ್‌ವೀಲ್ ಕ್ಲಬ್‌ನಿಂದ ಸಸಿ ನೆಡುವ ಕಾರ್ಯಕ್ರಮ




■ ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರವನ್ನು ಸಂರಕ್ಷಿಸುವ ಅಗತ್ಯತೆಯ ಬಗ್ಗೆ ಸಾಮಾಜಿಕವಾಗಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಇನ್ನರ್‌ವೀಲ್ ಕ್ಲಬ್ ಗದಗ–ಬೆಟಗೇರಿ ವತಿಯಿಂದ ಬೆಟಗೇರಿಯ ಸರಕಾರಿ ಐಟಿಐ ಕಾಲೇಜಿನಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕ್ಲಬ್‌ನ ಅಧ್ಯಕ್ಷರಾದ ಅಶ್ವಿನಿ ಜಗತಾಪ, ಸಸಿಗಳನ್ನು ನೆಡುವ ಮತ್ತು ಬೆಳೆದು ನಿಂತ ಮರಗಳನ್ನು ಉಳಿಸಿಕೊಳ್ಳುವ ಅವಶ್ಯಕತೆಯನ್ನು ವಿದ್ಯಾರ್ಥಿಗಳಿಗೆ ತಿಳಿಸಿ, ಪರಿಸರದ ಸಮತೋಲನವನ್ನು ಕಾಪಾಡುವುದರಲ್ಲಿ ಸಸ್ಯಗಳ ಪಾತ್ರವನ್ನು ವಿವರಿಸಿದರು.

ಕಾಲೇಜಿನ ಪ್ರಾಂಶುಪಾಲ ಡಾ. ಬಸವರಾಜ ಮಲ್ಲೂರ ಪರಿಸರ ಸಂರಕ್ಷಣೆಯ ಅಡಿಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಬಹುದು ಮತ್ತು ಪರಿಸರ ಸಂರಕ್ಷಣೆಯಲ್ಲಿ ನಮ್ಮ ಪಾತ್ರವೇನು ಎಂಬುದನ್ನು ತಿಳಿಸಿದರು. ಕಾಲೇಜಿನ ಉಪನ್ಯಾಸಕರಾದ ಸುನಿತಾ ಬುರಡಿ ಪರಿಸರವನ್ನು ರಕ್ಷಿಸಲು ಇರುವ ಹಲವು ಮಾರ್ಗಗಳನ್ನು ವಿವರಿಸಿದರು.

ಇನ್ನರ್‌ವೀಲ್ ಕ್ಲಬ್‌ನ ಕಾರ್ಯದರ್ಶಿ ಶಿವಲೀಲಾ ಅಕ್ಕಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಹಾಗೂ ಇನ್ನರ್ ವೀಲ್ ಕ್ಲಬ್‌ನ ಐಎಸ್.ಓ ಪೂಜಾ ಭೂಮಾ, ಎಡಿಟರ್ ವೀಣಾ ಕಾವೇರಿ, ಸಿಪಿಸಿಸಿ ಮೀನಾಕ್ಷಿ ಕೊರವಣ್ಣವರ್, ಅನ್ನಪೂರ್ಣ ವರವಿ, ಜಯಶ್ರೀ ಉಗಲಾಟ, ಆಶಾ ಪಟ್ಟಣಶೆಟ್ಟಿ, ಮಂಜುಳಾ ಅಕ್ಕಿ, ಸ್ಮಿತಾ ಹೊಸೂರ್ ಉಪಸ್ಥಿತರಿದ್ದರು.

# ಸಿಎಂ ನೇತೃತ್ವದ ನಿಯೋಗದಿಂದ ರಕ್ಷಣಾ ಸಚಿವರ ಭೇಟಿ; 2 ಡಿಫೆನ್ಸ್ ಕಾರಿಡಾರ್‌ಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬೆಂಗಳೂರು ಗ್ರಾಮಾಂತರ–ಕೋಲಾರ–ಚಿಕ್ಕಬಳ್ಳಾಪುರ ಮತ್ತು ಹುಬ್ಬಳ್ಳಿ ಧಾರವಾಡ–ಬೆಳಗಾವಿ–ವಿಜಯಪುರ ಜಿಲ್ಲೆಗಳಿಗೆ ಕೇಂದ್ರ ಸರಕಾರವು ಎರಡು ಪ್ರತ್ಯೇಕ ಡಿಫೆನ್ಸ್ ಕಾರಿಡಾರ್ ಮಂಜೂರು ಮಾಡಬೇಕೆಂದು ಕೋರಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರದ ನಿಯೋಗವು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಗೆ ಬುಧವಾರ ಮನವಿ ಸಲ್ಲಿಸಿದೆ.

ನಿಯೋಗದಲ್ಲಿ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ, ಇಂಧನ ಸಚಿವ ಕೆ ಜೆ ಜಾರ್ಜ್, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಇದ್ದರು.

ಕೇಂದ್ರ ಸರಕಾರವು 2018ರಲ್ಲಿ ಉತ್ತರಪ್ರದೇಶ ಮತ್ತು ತಮಿಳುನಾಡಿಗೆ ಡಿಫೆನ್ಸ್ ಕಾರಿಡಾರ್ ಮಂಜೂರು ಮಾಡಿದೆ. ಆದರೆ, ದೇಶದ ರಕ್ಷಣಾ ಮತ್ತು ವೈಮಾಂತರಿಕ್ಷ ವಲಯದಲ್ಲಿ ಕರ್ನಾಟಕವು ಶೇ.75ರಷ್ಟು ಪಾಲು ಹೊಂದಿದ್ದು, ಜಾಗತಿಕವಾಗಿ ಮೂರನೇ ಅತ್ಯುತ್ತಮ ಕಾರ್ಯಪರಿಸರ ಹೊಂದಿರುವ ಹೆಗ್ಗಳಿಕೆ ಸಂಪಾದಿಸಿದೆ. ಹೀಗಾಗಿ, ಉತ್ತರ ಕರ್ನಾಟಕ ಮತ್ತು ದಕ್ಷಿಣ ಕರ್ನಾಟಕಗಳಿಗೆ ಒಂದೊಂದು ಡಿಫೆನ್ಸ್ ಕಾರಿಡಾರ್ ಮಂಜೂರು ಮಾಡಿದರೆ, ಇದು ಮೇಕ್ ಇನ್ ಇಂಡಿಯಾ ಉಪಕ್ರಮಕ್ಕೂ ಬಲ ತುಂಬುತ್ತದೆ ಎಂದು ಸಿದ್ದರಾಮಯ್ಯ ಮನದಟ್ಟು ಮಾಡಿಕೊಟ್ಟಿದ್ದಾರೆ. ಈ ಸಂದರ್ಭದಲ್ಲಿ ಸಚಿವ ಪಾಟೀಲ ಅವರು ಕೂಡ ಪೂರಕ ಮಾಹಿತಿ ಒದಗಿಸಿದರು.



ಉತ್ತರ ಕರ್ನಾಟಕದ ಮೇಲ್ಕಂಡ ಮೂರು ಜಿಲ್ಲೆಗಳಲ್ಲಿ ರಕ್ಷಣಾ ವಲಯದ ಉತ್ಪಾದನಾ ಕಂಪನಿಗಳಾದ ಬಾಲೂ ಫೋರ್ಜ್, ಏಕಸ್, ಬಿಕಾರ್ ಏರೋಸ್ಪೇಸ್, ವಾಲ್‌ಚಂದ್ ನಗರ್ ಇಂಡಸ್ಟ್ರೀಸ್ ಮುಂತಾದವು ನೆಲೆಯೂರಿವೆ. ಜತೆಗೆ ಬೆಳಗಾವಿಯಲ್ಲಿ 250 ಎಕರೆಯಲ್ಲಿ ದೇಶದ ಪ್ರಪ್ರಥಮ ಪ್ರಿಸಿಶನ್ ಉತ್ಪಾದನೆಯ ವಿಶೇಷ ಆರ್ಥಿಕ ವಲಯವು ಸಕ್ರಿಯವಾಗಿದೆ. ಇಲ್ಲಿ 31 ಘಟಕಗಳಿದ್ದು, 5 ಸಾವಿರಕ್ಕೂ ಹೆಚ್ಚು ಜನರಿಗೆ ಉದ್ಯೋಗ ನೀಡಿವೆ ಎಂದು ಈ ಸಂದರ್ಭದಲ್ಲಿ ಗಮನಕ್ಕೆ ತರಲಾಗಿದೆ.

ದಕ್ಷಿಣ ಕರ್ನಾಟಕದ ಮೂರು ಜಿಲ್ಲೆಗಳಲ್ಲಿ ರಕ್ಷಣಾ ಸಾಮಗ್ರಿ ಮತ್ತು ವೈಮಾಂತರಿಕ್ಷ ಕಂಪನಿಗಳಾದ ಸಾರ್ವಜನಿಕ ವಲಯದ ಎಚ್‌ಎಎಲ್, ಕಾಲಿನ್ಸ್ ಏರೋಸ್ಪೇಸ್, ಡೈನಮ್ಯಾಟಿಕ್ ಟೆಕ್ನಾಲಜೀಸ್, ಸೆಂಟಮ್, ಸಾಸ್ಮೋಸ್, ಬೆಲ್ಲಾಟ್ರಿಕ್ಸ್ ಮುಂತಾದವು ಇವೆ. ಇವುಗಳೊಂದಿಗೆ ಟಿಎಎಸ್‌ಎಲ್ ತನ್ನ ಅಂತಿಮ ಜೋಡಣಾ ಘಟಕವನ್ನು ಆರಂಭಿಸುತ್ತಿದೆ. ಏರ್ ಇಂಡಿಯಾ ಮತ್ತು ಇಂಡಿಗೋ ಸಾವಿರಾರು ಕೋಟಿ ರೂ. ಬಂಡವಾಳ ಹೂಡಿಕೆಯೊಂದಿಗೆ ತಮ್ಮ ಎಂಆರ್‌ಒ ಘಟಕಗಳನ್ನು ಬೆಂಗಳೂರಿನ ಸಮೀಪದಲ್ಲಿ ಸ್ಥಾಪಿಸುತ್ತಿವೆ. ದೇವನಹಳ್ಳಿಯಲ್ಲಿ 2 ಸಾವಿರ ಎಕರೆ ವಿಸ್ತಾರದ ಹೈಟೆಕ್ ರಕ್ಷಣಾ ಮತ್ತು ವೈಮಾಂತರಿಕ್ಷ ಪಾರ್ಕ್ ಇದೆ. ಈ ಭಾಗದಲ್ಲಿ ದೇಶದ ಏರ್‌ಕ್ರಾಫ್ಟ್ ಮತ್ತು ಸ್ಪೇಸ್‌ಕ್ರಾಫ್ಟ್ ವಲಯದ ಶೇಕಡ 25ರಷ್ಟು ತಯಾರಿಕೆ ನಡೆಯುತ್ತಿದೆ. ವಿಮಾನ ಮತ್ತು ಹೆಲಿಕಾಪ್ಟರ್ ತಯಾರಿಕೆಯಲ್ಲಿ ರಾಜ್ಯದ ಕೊಡುಗೆ ಶೇ.67ರಷ್ಟಿದೆ. ಇವೆಲ್ಲವನ್ನೂ ಪರಿಗಣಿಸಿ, ಎರಡು ಡಿಫೆನ್ಸ್ ಕಾರಿಡಾರ್‌ಗಳನ್ನು ಮಂಜೂರು ಮಾಡಬೇಕೆಂದು ನಿಯೋಗವು ಒತ್ತಾಯಿಸಿದೆ.

ಮನವಿ ಸ್ವೀಕರಿಸಿದ ರಾಜನಾಥ್ ಸಿಂಗ್, ಇವುಗಳನ್ನು ಸೂಕ್ತವಾಗಿ ಪರಿಶೀಲಿಸುವ ಭರವಸೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಪ್ರತಿಯೊಬ್ಬರೂ ನೇತ್ರದಾನಕ್ಕೆ ಮುಂದಾಗಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಖ್ಯಾತ ವೈದ್ಯ ದಿ. ಡಾ. ತುಕಾರಾಮ ಮಹೇಂದ್ರಕರ ಇವರ ಸ್ಮರಣಾರ್ಥ, ವೈದ್ಯರ ದಿನಾಚರಣೆಯ ನಿಮಿತ್ತ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸೆ ನೆರವೇರಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕೇಶವ ದೇವಾಂಗ, ಮನುಷ್ಯನಿಗೆ ಕಣ್ಣುಗಳು ಅತ್ಯಮೂಲ್ಯವಾದ ಅಂಗವಾಗಿದೆ. ಕಣ್ಣುಗಳ ಆರೋಗ್ಯವನ್ನು ಜಾಗ್ರತೆಯಿಂದ ಕಾಯ್ದುಕೊಳ್ಳಬೇಕು. ಕಣ್ಣುಗಳ ಸಮಸ್ಯೆ ಇದ್ದಲ್ಲಿ ಸೂಕ್ತ ಚಿಕಿತ್ಸೆಯನ್ನು ಪಡೆದುಕೊಂಡು ಅವುಗಳನ್ನು ರಕ್ಷಿಸಿಕೊಳ್ಳಬೇಕು. ಪ್ರತಿಯೊಬ್ಬರೂ ನೇತ್ರದಾನವನ್ನು ಮಾಡಲು ಮುಂದಾಗಬೇಕೆಂದು ಹೇಳಿದರು.



ಡಾ. ಸುನೀಲ ಬುರಬುರೆ ಮಾತನಾಡಿ, ಶಿರಹಟ್ಟಿ ಪಟ್ಟಣದಲ್ಲಿ ಡಾ. ಟಿ.ಎಂ. ಮಹೇಂದ್ರಕರ ಓರ್ವ ಶ್ರಮಜೀವಿಯಾಗಿದ್ದರು. ವೈದ್ಯಕೀಯ ಕ್ಷೇತ್ರದಲ್ಲಿ ಸುಮಾರು 40 ವರ್ಷಗಳ ಕಾ ಸೇವೆಯನ್ನು ಸಲ್ಲಿಸುವುದರ ಜೊತೆಗೆ ವಿವಿಧ ಸಾಮಾಜಿಕ ಕಾರ್ಯಗಳಲ್ಲಿಯೂ ತಮ್ಮನ್ನು ತೊಡಗಿಸಿಕೊಂಡಿದ್ದರು ಎಂದರು.

ಪುನೀತ್ ಓಲೇಕಾರ, ಡಾ. ಪ್ರಸಾದ ಮಹೇಂದ್ರಕರ, ಡಾ. ಅಬ್ದುಲ್ ಧಾಲಾಯತ, ಡಾ. ಪ್ರಭುಗೌಡ ಪಾಟೀಲ, ಶಿವಮೊಗ್ಗ ಕಣ್ಣಿನ ಆಸ್ಪತ್ರೆಯ ಡಾ. ಪ್ರೀತಿ ಬಿ.ಬಿ, ಡಾ. ಪವನ್ ಮಹೇಂದ್ರಕರ ಸೇರಿದಂತೆ ತಾಲೂಕಾ ವೈದ್ಯರ ಸಂಘದ, ಔಷಧ ವಿತರಕರ ಮತ್ತು ರಕ್ತ ತಪಾಸಣಾ ವಿಭಾಗದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಸೇವಾಲಾಲ ಸರ್ಕಲ್ ನಿರ್ಮಿಸಲು ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಳಸಾಪುರ ರಿಂಗ್ ರೋಡ್‌ನಲ್ಲಿ ಸೇವಾಲಾಲ್ ಸರ್ಕಲ್ ನಿರ್ಮಾಣ ಮಾಡುವ ಕುರಿತು ಸೋಮು ಲಮಾಣಿ ನೇತೃತ್ವದಲ್ಲಿ ಬಂಜಾರಾ ಸಮಾಜದ ಎಲ್ಲಾ ಹಿರಿಯರು ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ನಾಮನಿರ್ದೇಶಕ ಬಸವರಾಜ್ ಕಡೆಮನಿ ಮತ್ತು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಕುಬೇರಪ್ಪ ಪವಾರ, ಸೋಮು ಲಮಾಣಿ, ಕೆ.ಸಿ. ನಭಾಪುರ, ವಿಠ್ಠಲ ದೊಡ್ಡಮನಿ, ನೇಮಪ್ಪ ಲಮಾಣಿ, ಪುಟ್ಟಪ್ಪ ಗುಡಿಮನಿ, ಕುಮಾರ ಪವಾರ, ತಿಪ್ಪಣ್ಣ ಪವಾರ, ಗೋಪಾಲ ಪೂಜಾರ, ಪಾಂಡು ಚವ್ಹಾಣ, ನೀಲು ರಾಠೋಡ, ತುಕಾರಾಮ ಲಮಾಣಿ, ಆಕಾಶ ಲಮಾಣಿ, ಅನಿಲ್ ಕಾರಭಾರಿ, ಲೋಕೇಶ್ ಕಟ್ಟಿಮನಿ, ರವೀಂದ್ರ ಇನಾಮತಿ, ಪ್ರಕಾಶ ಬೆಂತೂರ, ದುರಗೇಶ ವಿಭೂತಿ, ಠಾಕಪ್ಪ ಚವಾಣ, ತಾಲಪ್ಪ ಜಾಧವ, ಠಾಕುರ ಲಮಾಣಿ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka